MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 ಸಂಚಿಕೆ: 258 ಮಂಗಳವಾರ : 29-07-2025 ರಾಯಚೂರು RNI NO: KARKAN/2022/90446 ಪುಟ: 4 ಬೆಲೆ: ರೂ: 2-00

VOLUME: 04 ISSUE: 258 TUESDAY : 29-07-2025 RAICHUR EMAIL: YUVAMARGA@GMAIL.COM PAGE: 4 PRICE: Rs: 2-00


## ಟಿಬಿ ಡ್ಯಾಂಗೆ ಹೆಚ್ಚಿದ ಒಳ ಹರಿವು: 90 ಸಾವಿರ ನೀರು ಹೊರಕ್ಕೆ



**ಹೊಸಪೇಟೆ,ಜು28–** ತುಂಗಭದ್ರಾ ಜಲಾಶಯದ ಒಳ ಹರಿವು ಗಣನೀಯವಾಗಿ ಹೆಚ್ಚಳವಾಗಿರುವುದರಿಂದ ಶನಿವಾರ ಎರಡನೇ ಬಾರಿಗೆ ಡ್ಯಾಂ ನ 26 ಕ್ರಸ್ಟ್ ಗೇಟ್‌ಗಳಿಂದ 78 ಸಾವಿರ ಕ್ಯೂಸೆಕ್ ನೀರು ನದಿಗೆ ಹರಿಸಲಾಗಿದ್ದು ಒಟ್ಟಾರೆ 90 ಸಾವಿರ ನೀರು ಹರಿಬಿಡಲಾಗಿದೆ.

ತುಂಗಾ ಜಲಾಶಯದಿಂದ 70 ಸಾವಿರ ಕ್ಯೂಸೆಕ್, ಭದ್ರಾ ಅಣೆಕಟ್ಟಿನಿಂದ 20 ಸಾವಿರ ಕ್ಯೂಸೆಕ್ ನೀರು ಹರಿಸಲಾಗಿದೆ. ವರದಾ ನದಿ ಹಾಗೂ ತುಂಗಭದ್ರಾ ನದಿಯ ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆ ಮುಂದುವರಿದಿದ್ದರಿಂದ ತುಂಗಭದ್ರಾ ಜಲಾಶಯಕ್ಕೆ 67 ಸಾವಿರ ಕ್ಯೂಸೆಕ್ ನೀರು ದಾಖಲಾಗುತ್ತಿದೆ. ಹೀಗಾಗಿ 60 ರಿಂದ 90 ಸಾವಿರ ಕ್ಯೂಸೆಕ್ ನೀರು ನದಿಗೆ ಹರಿಸುವುದಾಗಿ ಟಿಬಿ ಬೋರ್ಡ್ ಎಚ್ಚರಿಕೆ ನೀಡಿದ್ದು, ಸದ್ಯ ಸರಾಸರಿ ಎಲ್ಲಾ ಮೂಲಗಳಿಂದಲೂ ಸೇರಿ 90 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ.

ಸದ್ಯ ಅಣೆಕಟ್ಟೆಯ 1633 ಅಡಿಯಲ್ಲಿ 1624.81 ಅಡಿಗೆ ನೀರು ತಲುಪಿದೆ. 105.788 ಟಿಎಂಸಿ ಅಡಿ ಒಟ್ಟು ಸಾಮರ್ಥ್ಯದಲ್ಲಿ 75.870 ಟಿಎಂಸಿ ಅಡಿ ನೀರು ಸಂಗ್ರಹಿಸಲಾಗಿದೆ. ಕಳೆದ ವರ್ಷ 19ನೇ ಕ್ರಸ್ಟ್ ಗೇಟ್ ಕೊಚ್ಚಿ ಹೋಗಿರುವ ಜಾಗದಲ್ಲಿ ತಾತ್ಕಾಲಿಕವಾಗಿ ಸ್ಟಾಪ್ಲರ್ ಗೇಟ್ ಅಳವಡಿಸಲಾಗಿದೆ. ಅಲ್ಲದೇ, ವಿವಿಧ ಗೇಟ್‌ಗಳ ಬದಲಾವಣೆಗೆ ತಜ್ಞರು ಸೂಚನೆ ನೀಡಿದ್ದರಿಂದ ಈ ಬಾರಿ ಗರಿಷ್ಠ 80 ಟಿಎಂಸಿ ಅಡಿ ನೀರು ಸಂಗ್ರಹಕ್ಕೆ ಟಿಬಿ ಬೋರ್ಡ್ ಮಿತಿಗೊಳಿಸಿದೆ

## ದಲಿತರಿಗಾದ ಅನ್ಯಾಯದ ವಿರುದ್ಧ ಹೋರಾಟ



**ಬೆಂಗಳೂರು,ಜು.28–**ಪರಿಶಿಷ್ಟ ಜಾತಿ ವರ್ಗದವರಿಗೆ ಮೀಸಲಾದ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲು ಮುಂದಾಗಿರುವ ರಾಜ್ಯಸರ್ಕಾರದ ನಡೆಯನ್ನು ಖಂಡಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ದಲಿತರಿಗೆ ಅನ್ಯಾಯ ಮಾಡುತ್ತಿರುವ ರಾಜ್ಯಸರ್ಕಾರದ ವಿರುದ್ಧ ಬಿಜೆಪಿ ಹೋರಾಟ ನಡೆಸಲಿದೆ ಎಂದಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಶೋಷಿತ ಸಮುದಾಯಗಳನ್ನು ನಿರಂತರ ವಂಚಿಸಿ ಅಧಿಕಾರ ಕಬಳಿಸುತ್ತ ಬಂದಿರುವ ಕಾಂಗ್ರೆಸ್ ಸರ್ಕಾರ ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿರಿಸಿದ್ದ ಹಣದಲ್ಲಿ ಸುಮಾರು 11 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳಲು ಮುಂದಾಗಿದೆ. ಇದು ಸಾಮಾಜಿಕ ನ್ಯಾಯ ವ್ಯವಸ್ಥೆಯ ಉದ್ದೇಶದ ಅಸ್ತಿತ್ವವನ್ನೇ ಅಲುಗಾಡಿಸಲು ಹೊರಟ ದಲಿತ ದ್ರೋಹಿ ಕ್ರಮವಾಗಿದೆ ಎಂದು ಟೀಕಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತ್ತೆತ್ತಿದರೆ ತಾವು ಅಹಿಂದಾ ನಾಯಕರು, ದಲಿತ ಉದ್ಧಾರಕರು ಎಂದು ತಮ್ಮ ಬೆನ್ನನ್ನು ತಾವೇ ತಟ್ಟಿಕೊಳ್ಳುತ್ತಾರೆ. ಆದರೆ ದಲಿತರಿಗೆ ಅನ್ಯಾಯ ಮಾಡಲು ಹೊರಟಿದ್ದಾರೆ ಇದು ಖಂಡನೀಯ ಎಂದಿದ್ದಾರೆ.

ದಲಿತರ ಕಲ್ಯಾಣಕ್ಕೆ ಇದ್ದ ಹಣವನ್ನು ಗ್ಯಾರೆಂಟಿಗಳಿಗೆ ಬಳಸಿ ಪರಿಶಿಷ್ಟ ಸಮುದಾಯದ ಕಲ್ಯಾಣಕಾರ್ಯಗಳಿಗೆ ಇತಿಶ್ರೀ ಆಡಲು ಹೊರಟಿರುವ ಸರ್ಕಾರದ ಕ್ರಮವನ್ನು ಸಹಿಸುವ ಮಾತೇ ಇಲ್ಲ.ಈ ನಿರ್ಧಾರದಿಂದ ರಾಜ್ಯಸರ್ಕಾರ ಹಿಂದೆ ಸರಿಯದಿದ್ದರೆ ಪರಿಶಿಷ್ಟರ ಪರ ದನಿ ಎತ್ತಿ ಬಿಜೆಪಿ ಸದನದಲ್ಲಿ ಹೋರಾಟ ನಡೆಸಲಿದೆ ಎಂದೂ ಅವರು ಹೇಳಿದ್ದಾರೆ.

## ಲಸಿಕೆಗಳಿಂದ ತಡೆಗಟ್ಟುವ ಕಾಯಿಲೆಗಳ ಕುರಿತು ಕಾರ್ಯಾಗಾರಕ್ಕೆ ಡಿಎಚ್‌ಓ ಚಾಲನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.28–**ಇಲ್ಲಿನ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರ್‌ಸಿಹೆಚ್ ವಿಭಾಗ, ಡಬ್ಲ್ಯು.ಹೆಚ್.ಓ ಕಲ್ಬುರ್ಗಿ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಲಸಿಕೆಗಳಿಂದ ತಡೆಗಟ್ಟುವ ಕಾಯಿಲೆಗಳ ಕುರಿತು ಕಾರ್ಯಾಗಾರವು ಯಶಸ್ವಿಯಾಗಿ ನಡೆಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, 12 ಮಾರಕ ರೋಗಗಳನ್ನು ವಯಸ್ಸಿಗೆ ಅನುಸಾರವಾಗಿ ಮಕ್ಕಳಿಗೆ ಹಾಕಿಸುವ ಮೂಲಕ ಮಗುವಿನಲ್ಲಿ ರೋಗದ ವಿರುದ್ಧ ನಿರೋಧಕತೆಯನ್ನು ಹೆಚ್ಚಿಸಲು ಪಾಲಕರ ಮನವೊಲಿಕೆ ಮೂಲಕ ಲಸಿಕೆಗಳನ್ನು ಹಾಕಿಸಲು ಸಮುದಾಯದಲ್ಲಿ ನಿರಂತರ ಜಾಗೃತಿ ನೀಡಬೇಕೆಂದರು.

ಹುಟ್ಟಿದ ತಕ್ಷಣದಿಂದ ಒಂದು ವರ್ಷದೊಳಗೆ ಶಿಶುವಿಗೆ ಅಗತ್ಯ ಲಸಿಕೆಗಳನ್ನು ತಪ್ಪದೆ ಒದಗಿಸಲು ಜಿಲ್ಲೆಯಾದ್ಯಂತ ಪ್ರತಿ ಗುರುವಾರ ಗ್ರಾಮ, ವಾರ್ಡ ಮಟ್ಟದಲ್ಲಿ ಹಾಗೂ ಆಸ್ಪತ್ರೆಗಳಲ್ಲಿ ದಿನನಿತ್ಯ ಹಾಕಲಾಗುತ್ತಿದ್ದು, ಈ ದಿಶೆಯಲ್ಲಿ ವಯಸ್ಸಿಗನುಸಾರವಾಗಿ ನೀಡುವ ಲಸಿಕೆಗಳನ್ನು ತಪ್ಪದೆ ಕೊಡಿಸಲು ಪಾಲಕರ ಮನವೊಲಿಸಿ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದೀತಾ ಎಮ್ ಎನ್. ಅವರು ಮಾತನಾಡಿ, ಮಗುವಿಗೆ ಬಾಲ್ಯಾವಧಿ ಕಾಡುವ ಮಾರಕ ರೋಗಗಳ ಲಕ್ಷಣಗಳು ಆಕಸ್ಮಿಕವಾಗಿ ಕಂಡುಬಂದಲ್ಲಿ ತಕ್ಷಣ ವರದಿ ಮಾಡುವ ಮೂಲಕ ಗಂಟಲು ಮಾರಿ, ದಡಾರ, ರೂಬೆಲ್ಲಾದಂತಹ ಪ್ರಕರಣಗಳನ್ನು ಸಕಾಲದಲ್ಲಿ ಗುರ್ತಿಸಿ ಚಿಕಿತ್ಸೆ ನೀಡಿ ರೋಗ ತಡೆಗೆ ಅವಕಾಶವಿದ್ದು, ಮುಖ್ಯವಾಗಿ 12 ಮಾರಕ**(2ನೇಪುಟಕ್ಕೆ)**

## ಜಾತ್ರ ಮಹೋತ್ಸವ ಅಂಗವಾಗಿ ರೈತ ಹಿತಚಿಂತನಾ ಗೋಷ್ಠಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.28–**ತಾಲೂಕಿನ ಚೀಕಲಪರ್ವಿ ಶ್ರೀ ರುದ್ರಮುನಿ ಮಹಾ ಶಿವಯೋಗಿಗಳ ಮಠದಲ್ಲಿ ಶ್ರೀರುದ್ರಮುನಿ ಮಹಾ ಶಿವಯೋಗಿಗಳ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವ ಅಂಗವಾಗಿ ನಡೆದ ರೈತ ಹಿತಚಿಂತನಾ ಗೋಷ್ಠಿಗೆ ಚಾಲನೆ ನೀಡಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕೃಷಿ ವಿಜ್ಞಾನಿ ಡಾ.ಎಂ.ಬಸವಣೆಪ್ಪ ಮಾತನಾಡಿ, ರೈತರು ತಮ್ಮ ಆರೋಗ್ಯವನ್ನು ಕಾಪಡಿಕೊಳ್ಳುವುದಕ್ಕೆ ತಮ್ಮ ಜಮೀನಿನಲ್ಲಿ ರಾಸಾಯನಿಕ ಮುಕ್ತವಾದ ಸಾವಯವ ಕೃಷಿ ಪದ್ದತಿಯನ್ನು ಅಳವಡಿಸಿಕೊಂಡು ತಮ್ಮ ಅಗತ್ಯಕ್ಕೆ ಅನುಗುಣವಾಗಿ ಆಹಾರ ಧಾನ್ಯಗಳನ್ನು,ತರಕಾರಿ, ಹಣ್ಣುಗಳನ್ನು ಬೆಳೆದುಕೊಳ್ಳಬೇಕು ಹಾಗೂ ಸ್ವಲ್ಪ ಜಮೀನು ಇದ್ದರು ಕೂಡ ರೈತರು ಕೃಷಿಯಲ್ಲಿ ಹೆಚ್ಚಿನ ಅದಾಯವನ್ನು ಪಡೆ




ಯುವುದಕ್ಕೆ ಒಂದೇ ಕ್ಷೇತ್ರದಲ್ಲಿ ವಿವಿಧ ಬೆಳೆಗಳನ್ನು ಬೆಳೆಯುವುದು, ಸಮಗ್ರ ಕೃಷಿ,ಸಾವಯವ ಕೃಷಿ, ಜಾನುವಾರು ಅಧಾರಿತವಾದ ಹೈನುಗಾರಿಕೆ,ಮೇಕೆ,ಕುರಿ,ಕೋಳಿ,ಟಗರು ಸಾಕಣೆಕೆಯನ್ನು ಒಳಗೊಂಡಾಗ ಮಾತ್ರ ಸಾಧ್ಯವಾಗುತ್ತದೆ. ಎಂದು ತಿಳಿಸಿದರು.

ಕೃಷಿ ಬೆಲೆ ಆಯೋಗದ ಮಾಜಿ ಅಧ್ಯಕ್ಷ ಹನುಮನಗೌಡ ಬೆಳಗುರ್ಕಿ ಮಾತನಾಡಿ, ವಿಶ್ವದ ಯಾವುದೇ ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಉಳಿಯಬೇಕಾದಲ್ಲಿ ಆ ದೇಶ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿಯಾಗಿರಬೇಕಾಗಿರುವುದು ಅವಶ್ಯವಾಗಿದೆ. ಸ್ವಾತಂತ್ರ ಸಮಯದಲ್ಲಿ ದೇಶದಲ್ಲಿ ಕೃಷಿ ಉತ್ಪಾದನೆ ಕೇವಲ 50 ದಶಲಕ್ಷ ಮಾತ್ರ ಇತ್ತು ಅದರೆ ಇಂದಿನ ಜನಸಂಖ್ಯೆಗೆ ಅನುಗುಣವಾಗಿ ಆಹಾರದ ಉತ್ಪಾದನೆಯಲ್ಲಿ **(2ನೇಪುಟಕ್ಕೆ)**

## ಉತ್ತಮ ಗುಣಮಟ್ಟದ ಕಾಮಗಾರಿ ನಿರ್ವಹಿಸಿ : ಶಾಸಕಿ ಕರೆಮ್ಮ

**ಯುವ ಮಾರ್ಗ ಸುದ್ದಿ**

**ದೇವದುರ್ಗ. ಜು.28–**ಗ್ರಾಮೀಣ ಪ್ರದೇಶದ ಹಾಗೂ ಪಟ್ಟಣದ ಸಾರ್ವಜನಿಕರಿಗೆ ಅಗತ್ಯ ಮೂಲ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿಕೈಗೊಳ್ಳುವ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ನಿರ್ಮಿಸಬೇಕು, ಕಳಪೆ ಕಾಮಗಾರಿಗೆ ಅವಕಾಶ ನೀಡಬೇಡಿ ಎಂದು ಶಾಸಕಿ ಕರೆಮ್ಮ.ಜಿ ನಾಯಕ ಸೂಚಿಸಿದರು.

ಸೋಮವಾರ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮೈಕ್ರೋ ಯೋಜನಾಡಿ ಪುರಸಭೆ ವ್ಯಾಪ್ತಿಯ ವಾಡ್ ಗಳಲ್ಲಿ 13.33 ಲಕ್ಷಗಳ ಕಾಮ ಗಾರಿಗಳಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣ ದಲ್ಲಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿದ್ದರೂ ಸಹ ಚುನಾವಣೆ ಯಲ್ಲಿ ಜನತೆಗೆ ಮಾತು ಕೊಟ್ಟಂತೆ




ಕ್ಷೇತ್ರದ ಅಭಿವೃದ್ಧಿಗಾಗಿ ಸಂಬಂಧಿಸಿದ ಸಚಿವರನ್ನು ಸಂಪರ್ಕಿಸಿ ಮೂಲ ಸೌಕರ್ಯ ಒದಗಿಸಲು ಅನುದಾನ ತರುತ್ತಿದ್ದೇನೆ, ಕ್ಷೇತ್ರದ ಜನತೆ ಗುಣ ಮಟ್ಟದ ಕಾಮಗಾರಿಗಳ ಮೇಲೆ ನಿಗಾ ಇಡಬೇಕು ಎಂದರು. ದೇವದುರ್ಗ ಪಟ್ಟಣದ ಪುರಸಭೆ ವ್ಯಾಪ್ತಿಯ ವಾರ್ಡ ನಂ 2 ರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕೊಠಡಿಗಳ ರಿಪೇರಿ, ಕೌಂಪೌಂಡ್ ನಿರ್ಮಾಣ ಹಾಗೂ ಕಾಲೇಜು ಆವರಣದಲ್ಲಿ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ವಾರ್ಡ ನಂ 2 ಸಿಪ್ಪತಿಗೇರಾ ವಾರ್ಡನಲ್ಲಿ ಸಿ.ಸಿ ಮತ್ತು ಚರಂಡಿ ನಿರ್ಮಾಣ, ವಾರ್ಡ ನಂ 15 ಚಂದನಕೆರೆ, ಹಾಗೂ ವಾರ್ಡ ನಂ 1 ಇಂದಿರಾನಗರ ವಾರ್ಡಗಳಲ್ಲಿ ಸಿ.ಸಿ. ಮತ್ತು ಚರಂಡಿ ನಿರ್ಮಾಣ, ವಾರ್ಡ ನಂ 22 ರ ಸ.ಕಿ.ಪ್ರಾ.ಶಾಲೆ ದರ್ಬಾರ ಓಣಿ ಶಾಲೆಗೆ 2 ಹೆಚ್ಚುವರಿ**(2ನೇಪುಟಕ್ಕೆ)**

## ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಕನಿಷ್ಠ ವೇತನ ಇಲ್ಲದೇ ಸಮಾಜ ಸೇವೆ ಮಾಡುವ ಪತ್ರಕರ್ತರು : ಸಚಿವ ಡಾ.ಶರಣಪ್ರಕಾಶ ಪಾಟೀಲ್

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು,28–**ಕನಿಷ್ಠ ವೇತನವೂ ಇಲ್ಲದೇ ಸಮಾಜಕ್ಕಾಗಿ ಸೇವೆ ಸಲ್ಲಿಸುತ್ತಿರುವ ಪತ್ರಕರ್ತರ ಬದುಕಿಗೆ ಭದ್ರತೆ ಇಲ್ಲವಾಗಿದೆ ಎಂದು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಮರುಗಿದರು.

ಪಟ್ಟಣದ ಶ್ರೀವಿಜಯಮಹಾಂತೇಶ್ವರ ಶಾಖಾಮಠದಲ್ಲಿ ಭಾನುವಾರ ಆಯೋಜಿಸಿದ್ದ ರಾಯಚೂರು ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವದ ಆರೋಗ್ಯ ಕಾಪಾಡುವುದು ಪತ್ರಿಕೋ




ದ್ಯಮದ ಮುಖ್ಯ ಕೆಲಸ. ಪತ್ರಕರ್ತ ತನ್ನ ಸರ್ವಸ್ವವನ್ನೂ ಧಾರೆ ಎರೆದು ಸಮಾಜದ ಹಿತಕ್ಕಾಗಿ ಕಾರ್ಯ ನಿರ್ವಹಿಸುತ್ತಾನೆ. ಆದರೆ, ಪತ್ರಕರ್ತನಾದವನಿಗೆ ಸಂಸಾರ ನಡೆಸುವುದಕ್ಕೂ ಚಿಂತಿಸುವ ಅನಿರ್ವಾಯತೆ ಇದೆ. ಬದುಕಿಗೆ ಭದ್ರತೆ ಇಲ್ಲವಾಗಿದೆ. ನಮ್ಮ ಸರಕಾರ ಪತ್ರಕರ್ತರಿಗೆ ಆರೋಗ್ಯ ಸಂಜೀವಿನಿ ಯೋಜನೆಯನ್ನು ವಿಸ್ತರಿಸುವ ಚಿಂತನೆಯಲ್ಲಿದೆ. ಪತ್ರಿಕೋದ್ಯಮ ಕಾರ್ಪೊರೇಟ್ ಕೈಯಲ್ಲಿ ಸಿಲುಕಿ ಸ್ವತಂತ್ರವನ್ನು ಕಳೆದುಕೊಂಡಿದ್ದು, ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾಗಿದೆ. ಸಾಮಾಜಿಕ ಜಾಲತಾಣದ ಪ್ರಭಾವದಿಂದ ಪತ್ರಿಕೆಗಳನ್ನು ಓದುವ ಹವ್ಯಾಸ ಕ್ಷೀಣಿಸಿದೆ. ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗದ ಕಾರ್ಯವೈಖರಿ, ಎಡರು–ತೊಡರುಗಳನ್ನು ಹಕ್ಕಿ ಸಮಾಜಕ್ಕೆ ತಿಳಿಹೇಳುವ ಮತ್ತು ಮೌಲ್ಯಮಾಪನ ಮಾಡುವ ಮಹತ್ವದ ಕೆಲಸ ಪತ್ರಕರ್ತರದ್ದು ಎಂದರು. ಪತ್ರಕರ್ತ ರಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಸರಕಾರ ನಿರ್ಧಾರ ಕೈಗೊಂಡಿದೆ. ಶಾಶ್ವತ ಸೂರು ಕಲ್ಪಿಸಲು ಸರಕಾರಿ ಭೂಮಿಯನ್ನು ಗುರುತಿಸಿ ನಿವೇಶನಗಳನ್ನು ಪತ್ರಕರ್ತರಿಗೆ ಹಂಚಿಕೆ ಮಾಡುವ ಕಾರ್ಯಕ್ಕೆ **(2ನೇಪುಟಕ್ಕೆ)**

## ರೈತರಿಗೆ ಕೃಷಿ ಯಂತ್ರೋಪಕರಣ ವಿತರಣೆ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.28–** ಕೃಷಿ ಇಲಾಖೆ ಸಹಾಯಧನ ಯೋಜನೆಯಡಿ ತಾಲೂಕಿನ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಜಿಲ್ಲಾ ಉಸ್ತುವಾರ ಸಚಿವ ಡಾ.ಶರಣಪ್ರಕಾಶ ಪಾಟೀಲ್‌ರು ಭಾನುವಾರ ವಿತರಣೆ ಮಾಡಿದರು.



ಶೇ.50 ರಷ್ಟು ಸಹಾಯಧನದಲ್ಲಿ ಬಿತ್ತನೆ ಕೂರಿಗೆ, ಪವರ್ ವೀಡರ್, ರೋಟೊವೇಟರ್, ಜೋಡುಪಾಳ ಪಲ್ಟಿ ಮಡಿಕೆ ಸೇರಿ ಸುಮಾರು 5 ಲಕ್ಷ ರೂಪಾಯಿ ಬೆಲೆಬಾಳುವ ಯಂತ್ರೋಪಕರಣಗಳನ್ನು ರೈತರಿಗೆ ವಿತರಿಸಿದ ಸಚಿವರು, ಯಂತ್ರಗಳ ಬಳಕೆ ಬಗ್ಗೆ ರೈತರೊಟ್ಟಿಗೆ ಚರ್ಚಿಸಿದರು. ಇಲಾಖೆ ಯೋಜನೆಗಳ ಸದ್ಬಳಕೆಗೆ ಕರೆ ನೀಡಿದರು.ಈ ಸಂದರ್ಭದಲ್ಲಿ ಶಾಸಕ ಮಾನಪ್ಪ ವಜ್ಜಲ್, ವಿಧಾನಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪೂರ, ಎ.ವಸಂತಕುಮಾರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಪ್ರಕಾಶ ಚೌಹಾಣ್, ತಾಲೂಕು ಅಧಿಕಾರಿ ಮಲ್ಲಿಕಾರ್ಜುನ ನಾಗರಾಳ ಸೇರಿ ಫಲಾನುಭವಿಗಳು ಇದ್ದರು.

## ಮೊದಲನೇಯ ಪುಟದಿಂದ

## ಲಸಿಕೆಗಳಿಂದ ತಡೆಗಟ್ಟುವ ಕಾಯಿಲೆಗಳ ಕುರಿತು ಕಾರ್ಯಾಗಾರಕ್ಕೆ ಡಿಎಚ್ಓ ಚಾಲನೆ

ರೋಗಗಳು ಮತ್ತು ಅವುಗಳ ವಿರುದ್ಧ ನೀಡುವ ಲಸಿಕೆಗಳನ್ನು ವಯಸ್ಸಿಗನುಸಾರವಾಗಿ ಪೋಲಿಯೋ ರೋಗಕ್ಕೆ ಪೋಲಿಯೋ ದ್ರಾವಣ, ಬಾಲಕ್ಷಯಕ್ಕೆ ಬಿಸಿಜಿ ಲಸಿಕೆ, ಕಾಮಾಲೆ ರೋಗಕ್ಕೆ ಹೆಪಟೈಟಿಸ್ ಚುಚ್ಚುಮದ್ದು, ಗಂಟಲು ಮಾರಿ, ನಾಯಿಕೆಮ್ಮು ಧನುರ್ವಾಯು ರೋಟ ವೈರಸ್, ಹೆಚ್ ಇನ್‌ಪ್ಲುಯೆಂಜಾ, ಕಾಮಾಲೆ ಗಾಗಿ ಪೆಂಟಾವೈಲೆಂಟ್ ಲಸಿಕೆ, ರೋಟಾವೈರಸ್ ಅತಿಸಾರಭೇದಿ ಗೆ ನಿಮೋಕಾಕಲ್ ಲಸಿಕೆ, ಮೆದುಳು ಜ್ವರ ರೋಗಕ್ಕೆ ಜಾಪನೀಸ್ ಎನ್ಸಲಿಟಿಸ್ ಲಸಿಕೆ, ದಡಾರ ರೂಬೇಲ್ಲಾ ರೋಗಕ್ಕೆ ಮಿಸಲ್ಸ್ ರೂಬೆಲ್ಲಾ ಲಸಿಕೆ, ಹಾಗೂ ಸಂಜೆಯ ಹೊತ್ತು ಕಂಡುಬರುವ ಇರುಳುಗಣ್ಣು ರೋಗಕ್ಕೆ ವಿಟಾಮಿನ್–ಎ ಅನ್ನಾಂಗ ದ್ರಾವಣ, ನೀಡಲಾಗುತ್ತಿರುವ ಹಾಗೂ ಇವೆಲ್ಲವುಗಳನ್ನು ಮಗುವಿನ ಒಂದು ವರ್ಷದೊಳಗೆ ಹಾಕಲಾಗುವ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಬೇಕೆಂದರು. ಕಾರ್ಯಾಗಾರದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ಸರ್ವೇಕ್ಷಣಾ ವೈದ್ಯಾಧಿಕಾರಿ ಡಾ.ಅನಿಲ್ ಲಕುಮಾರ ತಾಳಿಕೋಟ ಅವರು ವಿಶೇಷ ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹಮ್ಮದ್ ಶಾಕೀರ್, ಜಿಲ್ಲಾ ಎನ್‌ವಿಬಿಡಿಸಿಪಿ ಅಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಸೇರಿದಂತೆ ತಾಲೂಕಾ ಮೇಲ್ವಿಚಾರಣಾ ಅಧಿಕಾರಿಗಳು, ಸಿಬ್ಬಂದಿಯವರು ಹಾಗೂ ಇತರರು ಉಪಸ್ಥಿತರಿದ್ದರು.

## ಕನಿಷ್ಠ ವೇತನ ಇಲ್ಲದೇ ಸಮಾಜ ಸೇವೆ ಮಾಡುವ ಪತ್ರಕರ್ತರು : ಸಚಿವ ಡಾ.ಶರಣಪ್ರಕಾಶ ಪಾಟೀಲ್

ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡುತ್ತೇನೆ. ಜಿಲ್ಲೆಯ ಪತ್ರಕರ್ತರಿಗೆ ನಿವೇಶನ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದಾಗಿ ಸಚಿವರು ಹೇಳಿದರು.

**ಸರಕಾರ–ಜನರ ಮಧ್ಯದ ಕೊಂಡಿ :** ಪತ್ರಕರ್ತರು ಸರಕಾರ ಮತ್ತು ಜನರ ಮಧ್ಯದ ಕೊಂಡಿಯಾಗಿ ಕೆಲಸ ಮಾಡಬೇಕು ಎಂದು ಸಣ್ಣ ನೀರಾವರಿ ಸಚಿವ ಎನ್.ಎಸ್.ಭೋಸರಾಜು ಹೇಳಿದರು.ವೇದಿಕೆಯಲ್ಲಿ ಸಾಧಕ ಪತ್ರಕರ್ತರಿಗೆ ಸನ್ಮಾನಿಸಿ ಮಾತನಾಡಿದ ಅವರು, ಪತ್ರಕರ್ತರಿಗೆ ಕಾಂಗ್ರೆಸ್ ಸರಕಾರ ಹಲವು ಸವಲತ್ತುಗಳನ್ನು ನೀಡಿದೆ. ಅಲ್ಲದೇ, ಇನ್ನು ಸೌಲಭ್ಯ ಕಲ್ಪಿಸಲು ಮುಖ್ಯಮಂತ್ರಿಗಳು ಮನಸು ಮಾಡಿದ್ದಾರೆ. ಹಿಂದಿನ ಕಾಲದಲ್ಲಿದ್ದ ಪತ್ರಿಕೋದ್ಯಮ ಇವತ್ತು ಮಾಯವಾಗಿದೆ. ಸಾಮಾಜಿಕ ಜಾಲತಾಣದ ದೊಡೆತಕ್ಕೆ ಪತ್ರಿಕೋದ್ಯಮ ನಲುಗಿದೋಗಿದೆ. ಪತ್ರಕರ್ತರು ಎಚ್ಚರಿಕೆಯಿಂದ ಯಾವುದೇ ಅಮಿಶಗಳಿಗೆ ಒಳಗಾಗದೇ ನಿಸ್ವಾರ್ಥ ಸೇವೆ ಸಲ್ಲಿಸಬೇಕು. ವಯಕ್ತಿಕ ಹಗೆ ಸಾಧಿಸದೇ, ಸಮಾಜದ ಸ್ವಾಸ್ಥ್ಯ ಕಾಪಾಡುವ ವರದಿಗಳನ್ನು ಪ್ರಕಟಿಸಬೇಕು. ಎಂದು ಬೋಸರಾಜ ಹೇಳಿದರು.

**ವಾರ್ಷಿಕ ಪ್ರಶಸ್ತಿ;** ಜಿಲ್ಲೆಯ 11 ಜನ ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ಪ್ರದಾನ ಮಾಡಲಾಯಿತು. ಜೊತೆಗೆ ಹಿರಿಯ ಪತ್ರಕರ್ತರಾದ ಭೀಮರಾಯ ಹದ್ದಿನಾಳ, ಎನ್ .ಬಸವರಾಜ ನಿಜ ಇವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಸಚಿವರು, ಶಾಸಕರುಗಳು, ಅಧಿಕಾರಿಗಳು ಸನ್ಮಾನಿಸಿ ಗೌರವಿಸಿದರು.

ಬೆಂಗಳೂರಿನ ತ್ರಿವರ್ಣ ನ್ಯೂಸ್ ಸಂಪಾದಕ ಬಿ.ಎಂ. ಹನೀಫ್ ವಿಶೇಷ ಉಪನ್ಯಾಸ ನೀಡಿದರು. ಶ್ರೀಮಠದ ಸಿದ್ದಲಿಂಗ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಶಾಸಕರಾದ ಮಾನಪ್ಪ ವಜ್ಜಲ್, ಬಸನಗೌಡ ದದ್ದಲ್, ವಿಧಾನ ಪರಿಷತ್ ಸದಸ್ಯರಾದ ಕರಣಗೌಡ ಪಾಟೀಲ್ ಬಯ್ಯಾಪೂರ, ಎ.ವಸಂತಕುಮಾರ, ಜಿಲ್ಲಾಧಿಕಾರಿ ನಿತೀಶ ಕೆ., ಎಸ್‌ಪಿ ಮಟ್ಟಮಾದಯ್ಯ, ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು, ವಾರ್ತಾ ಇಲಾಖೆ ಅಧಿಕಾರಿ ಸುರೇಮಮಾನ್ ದಸ್ತಗಿರಿ ನದಾಫ್, ಗ್ಯಾರಂಟಿ ಯೋಜನೆ ಜಿಲ್ಲಾಧ್ಯಕ್ಷ ನಾಮಯ್ಯ ಮುರಾರಿ, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ಸಂಘದ ರಾಜ್ಯ ಸಮಿತಿ ಸದಸ್ಯ ಶಿವಮೂರ್ತಿ ಹಿರೇಮಠ, ಜಿಲ್ಲಾಧ್ಯಕ್ಷ ಆರ್.ಗುರುನಾಥ, ತಾಲೂಕ ತಾಲೂಕು ಅಧ್ಯಕ್ಷ ಗುರುರಾಜ ಗುರುರಾಜ ಗೌಡೂರು, ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ, ಉಪಾಧ್ಯಕ್ಷ ಖಾಜಾದುಸೇನ್, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್ ಸೇರಿ ಹಲವರು ಇದ್ದರು.

## ಜಾತ್ರ ಮಹೋತ್ಸವ ಅಂಗವಾಗಿ ರೈತ ಹಿತಚಿಂತನಾ ಗೋಷ್ಠಿ

ಹೆಚ್ಚಿನ ಸಾಧನೆ ತೋರುವುದು ಅವಶ್ಯವಾಗಿದ್ದು ಇಂದು ರೈತರು ಅಣೆಕ ಸುಧಾರಿತ ಕೃಷಿ ಕೈಗೊಳ್ಳುವು ಮೂಲಕ ಕೃಷಿಯಲ್ಲಿ ಹೆಚ್ಚಿನ ಇಳುವರಿಯನ್ನು ಪಡೆದರು ಕೂಡ ರೈತರಿಗೆ ಕೃಷಿ ಉತ್ಪನ್ನಗಳನ್ನು ನೇರವಾಗಿ ಮಾರಾಟ ಮಾಡುವುದಕ್ಕೆ ಉತ್ತಮ ಮಾರುಕಟ್ಟೆಯ ವ್ಯವಸ್ಥೆಯನ್ನು ಸರ್ಕಾರ ದಿಂದ ಮಾಡಿದಾಗ ಮಾತ್ರ ರೈತರಿಗೆ ಉತ್ತಮ ಬೆಲೆ ದೊರೆತು ಕೃಷಿಯಲ್ಲಿ ಲಾಭವನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಉತ್ಪಾದಕತೆ ಹೆಚ್ಚಿರುವ ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡುವುದು ಅವಶ್ಯವಾಗಿದೆ. ಆಹಾರ ಹೆಚ್ಚು ಉತ್ಪಾದನೆ ಮಾಡಿ ಹಂಚಿಕೆಮಾಡಿದಲ್ಲಿ ಮಾತ್ರ ಕಲ್ಯಾಣ ರಾಜ್ಯ ಸಾಧ್ಯವಾಗುವುದಕ್ಕೆ ಸಾಧ್ಯ ಕೃಷಿ ಬೆಲೆ ಅಯೋಗಕ್ಕೆ ಕೃಷಿ ಉತ್ಪದನೆ ವೆಚ್ಚ ತಿಳಿಯುವುದಕ್ಕೆ ಕೃಷಿ ಬೆಲೆ ಅಯೋಗಕ್ಕೆ ಇದೆ ಅದರೆ ಕಾರ್ಖಾನೆಯಲ್ಲಿ ಉತ್ಪಾದನೆಯಾಗುವ ವಸ್ತುವಿನ ಉತ್ಪಾದನೆ ವೆಚ್ಚ ತಿಳಿದು ಕೊಳ್ಳುವ ಹಕ್ಕು ಗ್ರಾಹಕರಿಗೆ ದೊರೆಯಬೇಕು ಎಂದು ತಿಳಿಸಿದರು.

ಶ್ರೀ ಮಠದ ಶ್ರೀ ಸದಾಶಿವಮಹಾಸ್ವಾಮಿಗಳು ಮಾತನಾಡಿ ಮಣ್ಣಿಗೆ ಕೂಡ ಜೀವ ಇದೆ ರೈತರು ನಿರಂತರವಾಗಿ ಮಣ್ಣಿಗೆ ವಿಷವನ್ನು ಉಣಿಸಿದಲ್ಲಿ ಮಣ್ಣಿನಲ್ಲಿನ ಸತ್ವ ಕಳೆದು ಕೊಳ್ಳುತ್ತದೆ. ಇದೆರೀತಿ ಹೆಚ್ಚಿನ ಪ್ರಮಾಣದಲ್ಲಿ ರಾಸಾಯನಿಕ ಗೊಬ್ಬರ ಬಳಸಿದಲ್ಲಿ ಇನ್ನೂ 25 ವರ್ಷದಲ್ಲಿ ಭೂಮಿಯು ಫಲವತ್ತತೆಯನ್ನು ಕಳೆದುಕೊಳ್ಳಲಿದೆ ಅದ್ದರಿಂದ ರೈತರು ಭೂಮಿಯ ಫಲವತ್ತತೆಯನ್ನು ಹೆಚ್ಚಿಸುವುದಕ್ಕೆ ಸಾವಯವ ಕೃಷಿ ಪದ್ದತಿಗೆ ಮರಳುವುದು ಅನಿವಾರ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಾಲ್ವಿ ಚರಣಗಿರಿ ಸಂಸ್ಥಾನ ಮಠದ ಶ್ರೀ ಅಭಿನವ ಮಹಾಂತ ಮಹಾಸ್ವಾಮಿಗಳು. ಮಾನ್ವಿ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯರು, ಮುನವಳ್ಳಿ ಶ್ರೀ ಸೋಮೇಶ್ವರ ಮಠದ ಶ್ರೀ ಮುರುಘೇಂದ್ರ ಮಹಾಸ್ವಾಮಿಗಳು, ಮೈಸೂರಿನ ನಿರಂಜನದೇವರು, ಶ್ರೀ ಶೈಲ ಶ್ರೀಗಳು, ಹಳೆಕೋಟೆ ಮರಿಶಿವಯೋಗಿಗಳ ವಿರಕ್ತಮಠದ ಶ್ರೀ ಸಿದ್ದಬಸವ ಮಹಾಸ್ವಾಮಿಗಳು, ಅರಳಹಳ್ಳಿ ಶರಣಬಸವ ದೇವರು, ಡಾ. ಚಂದ್ರಶೇಖರ ಸುವರ್ಣಗಿರಿ ಮಠ, ಶಂಕ್ರಯ್ಯಸ್ವಾಮಿ ಸುವರ್ಣಗಿರಿ ಮಠ, ಸೇರಿದಂತೆ ಇನ್ನಿತರರು ಇದ್ದರು.

## ಉತ್ತಮ ಗುಣಮಟ್ಟದ ಕಾಮಗಾರಿ ನಿರ್ವಹಿಸಿ : ಶಾಸಕಿ ಕರೆಮ್ಮ.ಜಿ ನಾಯಕ

ಕೊಠಡಿ ನಿರ್ಮಾಣ, ವಾರ್ಡ ನಂ 2 ನಸರತ್ ಕಾಲೋನಿ, ವಾರ್ಡ ನಂ 3 ಭಾರತ ಟಾಕೀಸ್ ಹತ್ತಿರ ವಾರ್ಡ ನಂ 1 ದರ್ಗಾ ಕಾಲೋನಿಯ ಅಲ್ಪಸಂಖ್ಯಾತರ ಕಾಲೋನಿಯಲ್ಲಿ ಸಿ.ಸಿ ಮತ್ತು ಚರಂಡಿ ನಿರ್ಮಾಣ, ವಾರ್ಡ ನಂ 8 ರ ಗೌರಂಪೇಟೆ ಶಾಲೆಗೆ 8 ಹೆಚ್ಚುವರಿ ಶಾಲಾ ಕೊಠಡಿ, ವಾರ್ಡ್ ನಂ 9 ಗೌತಮ ಓಣಿ ಶಾಲೆಗೆ 4 ಹೆಚ್ಚುವರಿ ಶಾಲಾ ಕೊಠಡಿಗಳು, ವಾರ್ಡ ನಂ 12 ಸ.ಮಾ..ಪ್ರಾ. ಕನ್ಯಾ ಶಾಲೆಯಲ್ಲಿ ಹಳೆ ಕಟ್ಟಡ ನೆಲಸಮಗೊಳಿಸಿ ಹೊಸ ಕಟ್ಟಡ ನಿರ್ಮಾಣ, ವಾರ್ಡ್ ನಂ 15 ದುರ್ಗಾದೇ ಗುಡಿಯಿಂದ ಸೂಲದಗುಡ್ಡವರೆಗೂ ಮುಖ್ಯರಸ್ತೆ ನಿರ್ಮಾಣ,ವಾರ್ಡ ನಂ 5 ಕಲ್ಲಿನ ಗಣಪತಿ ಹತ್ತಿರ ಹೈಟೆಕ್ ಶೌಚಾಲಯ ನಿರ್ಮಾಣ, ವಾರ್ಡ ನಂ 1 ದರ್ಗಾ ಕಾಲೋನಿಯ ವಾರ್ಡಗಳಲ್ಲಿ ಸಿ.ಸಿ.ಮತ್ತು ಚರಂಡಿ ನಿರ್ಮಾಣಕ್ಕೆ

ಚಾಲನೆ ನೀಡಿದರು,ಇದೆ ಸಂದರ್ಭದಲ್ಲಿ ಶರಣಪ್ಪ ಬಳೆ. ರೇಣುಕಾ ಸ್ವಾಮಿ. ಚಂದಪ್ಪ ಅಕ್ಕರಕಿ. ಮಹಬೂಬ್ ಗೌರಂಪೇಟ. ರಂಗಣ್ಣ ಪಾಟೀಲ್.. ಚಂದ್ರು ಬಸವರಾಜ. ಗೋವಿಂದ ರಾಜ. ಪ್ರಭು ದೊರೆ ಶಾಲಂ ಉದಾರ್ .ಲೋಕಪಯೋಗಿ ಇಲಾಖೆ ಬನ್ನಪ್ಪ. ಶಿಕ್ಷಣಾಧಿಕಾರಿ ಮಾದೇವಪ್ಪ. ಶಿವರಾಜ್ ಪೂಜಾರಿ.ಮುಖ್ಯ ಅಧಿಕಾರಿ ಕೆ ಹಂಪಯ್ಯ.ಲಕ್ಷ್ಮಣ ಅಕ್ಕರಿಕಿ, ನಾಗರಾಜ ಪಾಟೀಲ್, ಸಿದ್ದಣ್ಣಗ ಗಣೇಕಲ್,ಮೈನುದ್ದೀನ್, ರಮೇಶ್ ರಾಮನಾಳ, ಗೋವಿಂದರಾಜ್ ನಾಯಕ, ಇಸಾಕ್ ಮಸ್ತಿ, ನಿರ್ಮಲ ನಾಯಕ, ಶಾಲಂ ಉದ್ಧಾರ, ಮಯೂರ ಸ್ವಾಮಿ ಇದ್ದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

## ಉಚಿತ ಆರೋಗ್ಯ ತಪಾಸಣಾ ಶಿಬಿರ

**ಯುವ ಮಾರ್ಗ ಸುದ್ದಿ**

ಮಾನ್ವಿ,ಜು.28– ಪಟ್ಟಣದ ಅಶ್ವನಿ ಮಲ್ಟಿಸ್ಪೆಷಾಲಿಟಿ ಹಾಸ್ಪಿಟಲ್‌ನಲ್ಲಿ ಮಾನ್ವಿ ಲಯನ್ಸ್ ಕ್ಲಬ್ ಮತ್ತು ಅಶ್ವನಿ ಮಲ್ಟಿಸ್ಪೆಷಾಲಿಟಿ ಹಾಸ್ಪಿಟಲ್ ಸಹಭಾಗಿತ್ವದಲ್ಲಿ ನಡೆದ ಕಿವಿ, ಮೂಗು ಮತ್ತು ಗಂಟಲಿನ ಉಚಿತ ತಪಾಸಣಾ ಶಿಬಿರವನ್ನು ಅಶ್ವನಿ ಆಸ್ಪತ್ರೆಯ ಎಲುಬು ಮತ್ತು ಮೂಳೆ ಶಸ್ತ್ರ ಚಿಕಿತ್ಸ ತಜ್ಞ ವೈದ್ಯರಾದ ಡಾ.ಅಶ್ವನಿಕಾಂತ ಚಾಲನೆ ನೀಡಿ ಮಾತನಾಡಿ ನಮ್ಮ ಆಸ್ಪತ್ರೆಯಲ್ಲಿ ತಾಲೂಕಿನ ಬಡ ರೋಗಿಗಳಿಗೂ ತಜ್ಞ ವೈದ್ಯರಿಂದ ಉಚಿತವಾಗಿ ಚಿಕಿತ್ಸೆ ನೀಡುವ ಉದ್ದೇಶದಿಂದ ಉಚಿತ ಆರೋಗ್ಯ ಶಿಬಿರಗಳನ್ನು ನಡೆಸಲಾಗುತ್ತಿದ್ದು ತಾಲೂಕಿನ ಎಲ್ಲಾ ಜನರು ಆರೋಗ್ಯ ಶಿಬಿರದ ಪ್ರಯೋಜನ ಪಡೆಯುವಂತೆ ತಿಳಿಸಿದರು.

ಖ್ಯಾತ ಕಿವಿ.ಮೂಗು ,ಗಂಟಲು ತಜ್ಞರಾದ ಡಾ.ಜೆ.ಕೆ.ಗುಪ್ತಾ ಮಾತನಾಡಿ ಕಿವಿ ಸೋರುವಿಕೆ, ಕಿವಿ ತುರಿಕೆ, ಮೂಗು ನೋವು, ತಲೆ ಸುತ್ತು, ತಲೆ ನೋವು, ಕಿವುಡುತನ, ನೆಗಡಿ, ಗಂಟಲು ನೋವು ಮುಂತಾದ ಕಾಯಿಲೆಯುಳ್ಳವರಿಗೆ ಹಾಗೂ ಶ್ರವಣ ದೋಷ ಉಳ್ಳವರು ಕಿವಿ ಕೇಳುವಂತೆ ಗುಣಮಟ್ಟದ ಹಿಯರಿಂಗ್



ಮಷಿನ್‌ಗಳನ್ನು ಬಳಸಿದಲ್ಲಿ ಕಿವಿ ಕೇಳುವುದಕ್ಕೆ ಸಾಧ್ಯವಿದೆ ಮಾತು ಬಾರದವರಿಗೆ ಸ್ಪೀಚ್ ಥೆರಪಿಯೊಂದಿಗೆ ಚಿಕಿತ್ಸೆ ನೀಡಿದಲ್ಲಿ ಮಾತನಾಡಲು ಬರುವಂತೆ ಮಾಡಬಹುದಾಗಿದೆ ಎಂದು ತಿಳಿಸಿದರು.

ಡಾ.ಕೃಷ್ಣಯ್ಯ ,ಡಾ.ರಮ್ಯ ವೀರವಲ್ಲಿ, ಡಾ.ರೋಹಿಣಿ ಮಾನ್ವಿಕರ್, ತಾ.ವಿಪ್ರ ಸಮಾಜದ ಅಧ್ಯಕ್ಷರಾದ ಮುದ್ದುರಂಗರಾವ್ ಮುತಾಲಿಕ್, ಮಾನ್ವಿ ಲಯನ್ಸ್ ಕ್ಲಬ್ ಅಧ್ಯಕ್ಷ ಎಂ.ನಾಗರಾಜ ಸೇರಿದಂತೆ ಇನ್ನಿತರರು ಇದ್ದರು

## ಮಾಜಿ ಯೋಧರಿಂದ ಕಾರ್ಗಿಲ್ ವಿಜಯೋತ್ಸವ ಆಚರಣೆ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಜು.28**–ಪಟ್ಟಣದ ರಾಯಚೂರು ರಸ್ತೆಯಲ್ಲಿನ ಹುತಾತ್ಮ ವೀರಯೋಧ ಮಂಜುನಾಥ ಅಂಗಡಿ ಸಾದಪೂರ ಪುತ್ಥಳಿಗೆ ಪುಷ್ಪ ಸಮರ್ಪಿಸಿ ಮಾಜಿ ಯೋಧರಿಂದ ಕಾರ್ಗಿಲ್ ವಿಜಯೋತ್ಸವ ಆಚರಿಸಲಾಯಿತು.ಮಾಜಿ ಯೋಧ ಆಂಜನೇಯ ನಸ್ಲಾಪೂರ ಮಾತನಾಡಿ ದೇಶದ ರಕ್ಷಣೆಗಾಗಿ ಕಾರ್ಗಿಲ್ ಯುದ್ದದಲ್ಲಿ ಸುಮಾರು 527 ಯೋಧರು ಹುತಾತ್ಮರಾಗಿದ್ದರೆ ಅವರ ತ್ಯಾಗ ಬಲಿದಾನವನ್ನು ಪ್ರತಿಯೊಬ್ಬರು ಸ್ಮರಿಸುವ ಅಗತ್ಯವಿದೆ ಎಂದು ತಿಳಿಸಿದರು

ಮಾನ್ವಿ ತಾಲೂಕು, ಸಿರವಾರ ತಾಲೂಕಿನ ಕೇಂದ್ರೀಯ ಸಶಸ್ತ್ರ ಪಡೆಗಳ ಮಾಜಿ ಯೋಧರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಬಸವರಾಜ ನಾಯಕ ಮುಸ್ಟೂರ, ತಿಪ್ಪಣ್ಣ ಹರವಿ, ಜೆಲ್ಲಿ ಆಂಜನೇಯ್ಯ ನೀರಮಾನ್ವಿ, ಓಬಳೇಶ್ ನಾಯ್ಕ, ಉಪನ್ಯಾಸಕರಾದ ಡಾ ಹುಲಿಯಪ್ಪ ದುಮತಿ, ಅಂಬಣ್ಣ ನಾಯಕ ಉಮಳಿ ಹೊಸೂರ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ಗ್ರಾಪಂ ಮಾಜಿ ಅಧ್ಯಕ್ಷ ಕೊಲೆ: ಗುಂಡಿಕ್ಕಿ ಆರೋಪಿ ಸೆರೆ

**ಬೆಂಗಳೂರು,ಜು.28–** ಡಾಬಾದಲ್ಲಿ ಪಾರ್ಟಿ ಮಾಡುತ್ತಿದ್ದ ವೇಳೆ ದಾಳಿ ನಡೆಸಿ ಗ್ರಾಪಂ ಮಾಜಿ ಅಧ್ಯಕ್ಷ ಸ್ಥಳೀಯ ಕೈ ಮುಖಂಡ ಎನ್. ನಂಜೇಶ್ ಕೊಲೆಗೈದ ಕೊಲೆಗಾರನಿಗೆ ಕನಕಪುರ ಟೌನ್ ಪೊಲೀಸರು ಗುಂಡು ಹೊಡೆದು ಬಂಧಿಸಿದ್ದಾರೆ.

ಗ್ರಾಮ ಪಂಚಾಯಿತಿ ಸದಸ್ಯರಾಗಿರುವ ಹೊಂಗಾಣಿದೊಡ್ಡಿಯ ಎನ್. ನಂಜೇಶ್ (46) ಕೊಲೆಗಾರ ಶ್ರೀನಿವಾಸ್ ಕಾಲಿಗೆ ಗುಂಡು ತಗುಲಿ ಗಾಯಗೊಂಡು ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಎರಡು ದಿನಗಳ ಹಿಂದೆ ನಡೆದಿದ್ದ ಅಚ್ಚಲು ಗ್ರಾಮ ಪಂಚಾಯಿತಿ ಸದಸ್ಯ ಹಾಗೂ ಕಾಂಗ್ರೆಸ್ ಮುಖಂಡ ಹೊಂಗಾಣಿದೊಡ್ಡಿಯ ಎನ್. ನಂಜೇಶ್ (46) ಕೊಲೆ ಪ್ರಕರಣದ ಆರೋಪಿ ಶ್ರೀನಿವಾಸ್ ಕಾಲಿಗೆ ಕನಕಪುರ ಟೌನ್ ಇನ್‌ಸ್ಪೆಕ್ಟರ್ ಅನಂತರಾಮು ನೇತೃತ್ವದ ತಂಡ ಸೋಮವಾರ ಬೆಳಿಗ್ಗೆ ಗುಂಡು ಹಾರಿಸಿ ಬಂಧಿಸಿದೆ.

ಘಟನೆಯಲ್ಲಿ ಠಾಣೆಯ ಕಾನ್‌ಸ್ಟೆಬಲ್ ರಮೇಶ್‌ಗೆ ಗಾಯಗೊಂಡಿದ್ದಾರೆ. ಆರೋಪಿ ಶ್ರೀನಿವಾಸ್‌ಗೆ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ದಯಾನಂದ ಸಾಗರ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ರಮೇಶ್ ಅವರನ್ನು ಸಹ ಅದೇ ಆಸ್ಪತ್ರೆಗೆ ದಾಖಲಿಸಲಾಗಿದೆ.

ಕಳೆದ ಜು.26ರಂದು ರಾತ್ರಿ ಸಾತನೂರಿನ ಆರ್.ಕೆ. ಡಾಬಾ ಎದುರು ನಂಜೇಶ್ ಅವರನ್ನು ನಾಲ್ವರು ಸಹಚರರೊಂದಿಗೆ



ಕೊಲೆ ಮಾಡಿದ್ದ ಶ್ರೀನಿವಾಸ್, ತಾಲ್ಲೂಕಿನ ಗಬ್ಬಾಡಿಯಲ್ಲಿ ತಲೆ ಮರೆಸಿಕೊಂಡಿದ್ದ. ಈ ಕುರಿತು ಖಚಿತ ಮಾಹಿತಿ ಮೇರೆಗೆ ಇನ್ಸ್‌ಪೆಕ್ಟರ್ ಅನಂತರಾಮು ನೇತೃತ್ವದ ತಂಡ ಆರೋಪಿಯನ್ನು ಬಂಧಿಸಲು ಬೆಳಿಗ್ಗೆ 6 ಗಂಟೆ ಸುಮಾರಿಗೆ ಸ್ಥಳಕ್ಕೆ ತೆರಳಿತ್ತು.

ಈ ವೇಳೆ ಶ್ರೀನಿವಾಸ್ ಕಾನ್‌ಸ್ಟೆಬಲ್ ರಮೇಶ್ ಮೇಲೆ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ. ಎಚ್ಚರಿಕೆ ಲೆಕ್ಕಿಸದೆ ತಪ್ಪಿಸಿಕೊಳ್ಳಲು ಮುಂದಾದಾಗ ಅನಂತರಾಮು ಅವರು ಮೊದಲು ಒಂದು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಕೆ ನೀಡಿದರೂ ಮತ್ತೆ ಹಲ್ಲೆಗೆ ಮುಂದಾದಾಗ ಆತ್ಮರಕ್ಷಣೆಗೆ ಮತ್ತೊಂದು ಗುಂಡು ಹಾರಿಸಿದ್ದು,ಅದು ಆರೋಪಿ ಕಾಲಿಗೆ ತಗುಲಿ ಕುಸಿದು ಬಿದ್ದಿದ್ದಾನೆ.ಕೂಡಲೇ ಬಂಧಿಸಿ ಆಸ್ಪತ್ರೆಗೆ ದಾಖಲಿಸಲಾಯಿತು ಎಂದು ರಾಮನಗರ ಎಸ್ ಪಿ ಶ್ರೀನಿವಾಸ್ ಗೌಡ ತಿಳಿಸಿದ್ದಾರೆ.

## ಕಾಂಗ್ರೆಸ್ ರೈತ ವಿರೋಧಿ ಸರ್ಕಾರ : ಭಗವಂತ ಖೂಬಾ ಆರೋಪ

**ಬೀದರ್,ಜು.28**–ಕೇಂದ್ರ ಸರ್ಕಾರದಿಂದ ಬಿತ್ತನೆಗಾಗಿ ರಸಗೊಬ್ಬರ ಕಳುಹಿಸಿದರೂ ರಾಜ್ಯ ಕಾಂಗ್ರೆಸ್ ಸರ್ಕಾರ ಕೃತಕ ಅಭಾವ ಸೃಷ್ಟಿಸಿ ಕಾಳ ಸಂತೆಯಲ್ಲಿ ಮಾರಾಟ ಮಾಡುತ್ತಿದೆ. ಇದು ಕೂಡಲೇ ನಿಲ್ಲಬೇಕು. ರೈತರಿಗೆ ಸಮರ್ಪಕವಾಗಿ ರಸಗೊಬ್ಬರ ವಿತರಣೆ ಮಾಡಬೇಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಭಾನುವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರೈತವಿರೋಧಿ ಸರ್ಕಾರವಾಗಿದೆ. ಕೇಂದ್ರವು ಯೂರಿಯಾ ರಸಗೊಬ್ಬರವನ್ನು 8.73 ಲಕ್ಷ ಮೆಟ್ರಿಕ್ ಟನ್, ಡಿಎಪಿ 2.87 ಲಕ್ಷ ಮೆಟ್ರಿಕ್ ಟನ್, ಎನ್.ಪಿ.ಕೆ.ಎಸ್. 12.41 ಲಕ್ಷ ಮೆ. ಟನ್ ರಸಗೊಬ್ಬರ ರಾಜ್ಯಕ್ಕೆ ಕಳುಹಿಸಿದೆ. ಅದರಲ್ಲಿ ಬೀದರ ಜಿಲ್ಲೆಗೆ ಯೂರಿಯಾ 13727 ಮೆ.ಟನ್, ಡಿ.ಎ.ಪಿ. 13211



ಮೆ. ಟನ್ ಕಳುಹಿಸಿದೆ. ಅದರಲ್ಲಿ 8139 ಮೆ. ಟನ್ ಯೂರಿಯಾ ಮಾರಾಟ ಮಾಡಲಾಗಿದೆ. ಡಿ.ಎ.ಪಿ. 7274 ಮೆ.ಟನ್ ರಸಗೊಬ್ಬರ ಮಾರಾಟ ಮಾಡಲಾಗಿದೆ. ಯೂರಿಯಾ ಜಿಲ್ಲೆಯಲ್ಲಿ ಇನ್ನೂ 1363 ಮೆ. ಟನ್ ಲಭ್ಯವಿದೆ. ಡಿ.ಎ.ಪಿ. 2047 ಮೆ. ಟನ್ ಜಿಲ್ಲೆಯಲ್ಲಿ ಲಭ್ಯವಿದೆ. ಆದರೂ ಕೂಡ ರಾಜ್ಯ ಸರ್ಕಾರ ಕೃತಕ ಅಭಾವ ಸೃಷ್ಟಿಸಿ ರೈತರಿಗೆ ತೊಂದರೆ ನೀಡುತ್ತಿದೆ ಎಂದರು.

# ಹಲವೆಡೆ ವರುಣನ ಅಬ್ಬರ ಜನಜೀವನ ಅಸ್ತವ್ಯಸ್ತ

**ಬೆಂಗಳೂರು,ಜು.28**–ರಾಜ್ಯದ ಕರಾವಳಿ, ಮಲೆನಾಡು ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮಳೆ ಅಬ್ಬರ ಜೋರಾಗಿದೆ. ಉ.ಕನ್ನಡ ಜಿಲ್ಲೆಯಲ್ಲಿ ಕಳೆದ ಕೆಲ ದಿನಗಳಿಂದ ಎಡೆಬಿಡದೆ ಸುರಿಯುತ್ತಿರುವ ಭಾರಿ ಗಾಳಿ–ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದೆ.

ಮಳೆಯಿಂದಾಗಿ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದ್ದು, ಹಲವೆಡೆ ಹೆದ್ದಾರಿಗಳಲ್ಲಿ ಗುಡ್ಡ ಕುಸಿತ ಉಂಟಾಗಿ ಆತಂಕ ಉಂಟು ಮಾಡಿದೆ. ಒಂದು ವಾರದ ಅವಧಿಯಲ್ಲಿ ಜಿಲ್ಲೆಯಲ್ಲಿ 312 ಮಿ.ಮೀ ಮಳೆ ಸುರಿದಿದೆ. ಸಿದ್ದಾಪುರ ಸೇರಿದಂತೆ ಕರಾವಳಿ ತಾಲ್ಲೂಕುಗಳಲ್ಲಿ 400 ರಿಂದ 600 ಮಿಮೀ ಮಳೆ ಬಿದ್ದಿದೆ.

ಕೊಂಚ ಮಳೆ ಬಿಡುವು ಕೊಟ್ಟಿದ್ದರೂ ಸಂಜೆಯಾಗುತ್ತಿದ್ದಂತೆ ವರುಣ ಅಬ್ಬರಿಸಿದ್ದಾನೆ. ಬಿರುಗಾಳಿ ಸಮೇತ ಮಳೆ ಸುರಿಯುತ್ತಿರುವುದರಿಂದ ಸಾಕಷ್ಟು ಹಾನಿ ಯಾಗಿದೆ.

ಮಳೆಯಿಂದಾಗಿ ಅಗನಾಶಿನಿ, ಗುಂಡಬಾಳ ನದಿಗಳು ಉಕ್ಕಿ ಹರಿಯುತ್ತಿವೆ. ಇದರಿಂದಾಗಿ ಹೊನ್ನಾವರ ಹಾಗೂ ಕುಮಟದ ಕೆಲವೆಡೆ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ.

ಪ್ರವಾಹಕ್ಕೆ ಸಿಲುಕಿರುವ 395 ಜನರಿಗೆ ಕಾಳಜಿ ಕೇಂದ್ರಗಳಲ್ಲಿ ಆಶ್ರಯ ಕಲ್ಪಿಸಲಾಗಿದೆ. ಗಾಳಿ–ಮಳೆಯಿಂದಾಗಿ ಕುಮಟ, ಶಿರಸಿ ಹೆದ್ದಾರಿಯ ದೇವಿ ಮನೆ ಬೆಟ್ಟದ ಕ್ಷೇತ್ರ, ಪಾಲೇಶ್ವರ ದೇವಸ್ಥಾನದ ಮೆಟ್ಟಲು ಭಾಗದಲ್ಲಿ ಭಾರಿ ಪ್ರಮಾಣದಲ್ಲಿ ಗುಡ್ಡ ಕುಸಿತ ಉಂಟಾಗಿದೆ.

ಮಳೆಯಿಂದಾಗಿ ಹಲವು ಭಾಗಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ.



ಬಿರುಗಾಳಿ–ಮಳೆಯಿಂದಾಗಿ ಅಂಕೋಲಾ ತಾಲ್ಲೂಕಿನ ಹಾರವಾಡ ಪುನರ್‌ವಸತಿ ಕೇಂದ್ರದ ಶಾಲೆ ಮೇಲ್ಛಾವಣಿ ಹಾರಿ ಹೋಗಿದೆ. ಆದರೆ, ಯಾವುದೇ ಅನಾಹುತವಾಗಿಲ್ಲ.ಕಲಬುರಗಿ ಜಿಲ್ಲೆಯಲ್ಲೂ ಧಾರಾಕಾರ ಮಳೆಯಾಗುತ್ತಿದೆ. ಹಲವೆಡೆ ಮನೆಗಳ ಗೋಡೆ ಕುಸಿದು ಜಾನುವಾರುಗಳು ನೀರಿನಲ್ಲಿ ಕೊಚ್ಚಿ ಹೋಗಿವೆ.

ಕಮಲಾಪುರ ತಾಲ್ಲೂಕಿನ ಉದಾಮುಡ ಗ್ರಾಮದ ಸೇತುವೆ ಮೇಲೆ ಹಳ್ಳದ ನೀರಿನ ರಭಸಕ್ಕೆ ಸಿಲುಕಿ ಜಾನುವಾರುಗಳು ಕೊಚ್ಚಿ ಹೋಗಿವೆ. ರೈತರು ತಮ್ಮ ಜಾನುವಾರುಗಳನ್ನು ಜಮೀನುಗಳಿಗೆ ಕರೆದೊಯ್ಯುವ ವೇಳೆ ಈ ಅವಘಡ ಸಂಭವಿಸಿದೆ.

ಜಾನುವಾರುಗಳನ್ನು ಕಳೆದುಕೊಂಡ ರೈತರು ಕಂಗಾಲಾಗಿದ್ದಾರೆ. ಚಿತ್ತಾಪುರ ತಾಲ್ಲೂಕಿನಲ್ಲಿ ವರುಣನ ಅಬ್ಬರದಿಂದಾಗಿ ಸಿದ್ದಾಪುರ ತಾಲ್ಲೂಕಿನಲ್ಲಿ ಜನಜೀವನ ಏರುಪೇರಾಗಿದೆ.ತಾಲ್ಲೂಕಿನ ದಂಡೋತಿ ಗ್ರಾಮದಲ್ಲಿ ಎರಡು ಮನೆಗಳ ಗೋಡೆ ಕುಸಿದು ಹಾನಿಯುಂಟಾಗಿದೆ. ಆದರೆ, ಘಟನೆಯಲ್ಲಿ ಯಾವುದೇ ಅನಾಹುತಗಳಾಗಿಲ್ಲ.

ಮಲೆನಾಡಿನಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಟಿಬಿ ಡ್ಯಾಂ ನಲ್ಲಿ ಒನ ಹರಿವು ಹೆಚ್ಚಾಗಿದೆ. ಅಣೆಕಟ್ಟೆ 26 ಗೇಟ್‌ಗಳಿಂದ 90,883 ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದ್ದು, ಹಂಪಿ ಸ್ಮಾರಕಗಳಿಗೆ ಮುಳುಗಡೆ ಭೀತಿ ಎದುರಾಗಿದೆ.

ಜಲಾಶಯದ 33 ಗೇಟ್‌ಗಳ ಪೈಕಿ 26 ಟ್ರಸ್ಟ್ ಗೇಟ್‌ಗಳ ಮೂಲಕ ನೀರು ಹೊರಬಿಡಲಾಗುತ್ತಿದ್ದು, ತುಂಗಭದ್ರಾ ನದಿ ಪಾತ್ರದಲ್ಲಿ ಪ್ರವಾಹದ ಆತಂಕ ಮನೆ ಮಾಡಿದೆ. ನದಿ ತೀರಕ್ಕೆ ತೆರಳದಂತೆ ಜನರಿಗೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

**3 ಜಿಲ್ಲೆಗಳಿಗೆ ಆರೆಂಜ್ ಅಲರ್ಟ್:** ರಾಜ್ಯದಲ್ಲಿ ಮಳೆ ಮುಂದುವರೆದಿರುವ ಬೆನ್ನಲ್ಲೆ ಉ.ಕನ್ನಡ, ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ಉಳಿದ ಎಲ್ಲ ಜಿಲ್ಲೆಗಳಿಗೂ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಗಾಳಿಯ ವೇಗ ಪ್ರತಿ ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಬೀಸಲಿದ್ದು, ಮೀನುಗಾರರು ಸಮುದ್ರಕ್ಕಿಳಿಯಂದತೆ ಎಚ್ಚರಿಕೆ ನೀಡಲಾಗಿದೆ.

# ಆಪರೇಷನ್ ಸಿಂಧೂರ ಐತಿಹಾಸಿಕ ಕ್ರಮ: ರಾಜ್ ನಾಥ್, 9 ಉಗ್ರರ ನೆಲೆ ಧ್ವಂಸ

**ನವದೆಹಲಿ, ಜು.28–** ಪಹಲ್ಗಾವ್ ದಾಳಿಗೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ 9 ಉಗ್ರರ ನೆಲೆಗಳು ಹಾಗೂ 100 ಮಂದಿ ಭಯೋತ್ಪಾದಕರನ್ನು ಹತ್ಯೆ ಮಾಡಿದ್ದೇವೆ. ಇದು ಸುಸಂಘಟಿತ ದಾಳಿ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಲೋಕಭೆಯಲ್ಲಿ ಹೇಳಿದರು.

ಆಪರೇಷನ್ ಸಿಂಧೂರ್ ಐತಿಹಾಸಿಕ ಮಿಲಿಟರಿ ಕ್ರಮ. ಭಯೋತ್ಪಾದನೆಯ ವಿರುದ್ಧ ನಮ್ಮ ನೀತಿಯು ಪರಿಣಾಮಕಾರಿಯಾಗಿದೆ ಎಂದು ಅವರು ಬಣ್ಣಿಸಿದರು.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ ಕುರಿತು ಲೋಕಸಭೆಯಲ್ಲಿ ಭಾಷಣ ಮಾಡಿದ ಅವರು, ಮಾತುಕತೆ ಹಾಗೂ ಭಯೋತ್ಪಾದನೆ ಒಟ್ಟಿಗೆ ಹೋಗಲು ಸಾಧ್ಯವಿಲ್ಲ ಎಂದು ಪಾಕಿಸ್ತಾನಕ್ಕೆ ತಿರುಗೇಟು ನೀಡಿದರು.

ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಜೈಷ್ –ಇ ಮೊಹಮ್ಮದ್ ಲಷ್ಕರ್ –ಇ ತೊಯ್ಬಾ ಹಾಗೂ ಇಂಡಿಯನ್ ಮುಜಾಹಿದ್ದೀನ್ ಸಂಘಟನೆ ಯೊಂದಿಗೆ ಹತರಾದ ಉಗ್ರರರು ನಂಟು ಹೊಂದಿದ್ದರು ಎಂದರು.

ಈ ಸೇನಾ ಕಾರ್ಯಾಚರಣೆ ಕೇವಲ 22 ನಿಮಿಷಗಳಲ್ಲಿ ಪೂರ್ಣಗೊಳಿಸಿ ಪಹಲ್ಗಾಮ್‌ನಲ್ಲಿ ನಡೆದ ಹತ್ಯೆಗಳಿಗೆ ಪ್ರತೀಕಾರ ತೀರಿಸಿಕೊಳ್ಳ ಲಾಯಿತು. ಈ ದಾಳಿಗಳನ್ನು ದೊಡ್ಡ ಸಂಘರ್ಷ ಅಥವಾ ಯುದ್ಧವನ್ನು ಪ್ರಚೋದಿಸುವುದನ್ನು ತಪ್ಪಿಸಲು ಎಚ್ಚರಿಕೆಯಿಂದ ಯೋಜಿಸಲಾಗಿತ್ತು. ಅವುಗಳನ್ನು




ಸೀಮಿತ ಪ್ರತಿಕ್ರಿಯೆಯಾಗಿ ಉದ್ದೇಶಿಸಲಾ ಗಿತ್ತು ಎಂದು ಹೇಳಿದರು.

ಪಾಕಿಸ್ತಾನಕ್ಕೆ ನಮ್ಮ ನೆಲೆಗಳ ಮೇಲೆ ದಾಳಿ ಮಾಡಲು ಸಾಧ್ಯವಾಗಲಿಲ್ಲ, ನಮ್ಮ ಯಾವು ದೇ ಪ್ರಮುಖ ಆಸ್ತಿ ಪಾಸ್ತಿಗೆ ಹಾನಿ ಯಾಗಿಲ್ಲ ಎಂದು ಅವರು ಸ್ಪಷ್ಟಪಡಿಸಿ ದರು. ಪಾಕಿಸ್ತಾನ, ಭಾರತೀಯ ಸೇನಾ ನೆಲೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿತು, ಎಸ್ –400 ಮತ್ತು ಇತರ ವಾಯು ರಕ್ಷಣಾ ವ್ಯವಸ್ಥೆಗಳಿಂದ ಅದನ್ನು ಹಿಮ್ಮೆಟ್ಟಿಸಲಾಯಿತು ಎಂದು ಅವರು ದಾಳಿಯ ವಿವರವನ್ನು ಬಿಚ್ಚಿಟ್ಟರು.

ಆಪರೇಷನ್ ಸಿಂಧೂರವನ್ನು ಕಾರ್ಯಗತ ಗೊಳಿಸುವ ಮೊದಲು, ನಮ್ಮ ಪಡೆಗಳು ಪ್ರತಿಯೊಂದು ಅಂಶವನ್ನು ಅಧ್ಯಯನ ಮಾಡಿ, ಭಯೋತ್ಪಾದಕರಿಗೆ ಗರಿಷ್ಠ ಹಾನಿಯನ್ನುಂಟು ಮಾಡುವ ಆಯ್ಕೆಯನ್ನು ಆರಿಸಿಕೊಂಡವು. ಆದರೆ, ಮುಗ್ಧ ನಾಗರಿಕರಿಗೆ ಯಾವುದೇ ಹಾನಿಯಾಗದಂತೆ ನೋಡಿಕೊಳ್ಳುತ್ತಿದ್ದವು ಎಂದು ಸಿಂಗ್ ಹೇಳಿದರು.

ವಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ ರಾಜನಾಥ್ ಸಿಂಗ್, ಯಾವುದೇ ಪರೀಕ್ಷೆಯಲ್ಲಿ ಫಲಿತಾಂಶ ಮುಖ್ಯ. ಪರೀಕ್ಷೆಯ ಸಮಯದಲ್ಲಿ ಪೆನ್ಸಿಲ್ ಮುರಿದಿದೆಯೇ ಅಥವಾ ಪೆನ್ನು ಕಳೆದುಹೋಯಿತಾ ಎಂಬುದಲ್ಲ. ಅಂತಿಮವಾಗಿ, ಫಲಿತಾಂಶಗಳು ಮುಖ್ಯ ಎಂದು ಆಪರೇಷನ್ ಸಿಂಧೂರದ ಕುರಿತು ಪ್ರಶ್ನೆ ಎತ್ತುತ್ತಿರುವ ವಿಪಕ್ಷ ನಾಯಕರ ವಿರುದ್ಧ ಹರಿಹಾಯ್ದರು.

ಯಾವುದೋ ಒತ್ತಡದಿಂದ ಆಪರೇಷನ್ ಸಿಂಧೂರ ನಿಲ್ಲಿಸಲಾಗಿದೆ ಎಂದು ಹೇಳುವುದು ಆಧಾರರಹಿತ ಮತ್ತು ಸಂಪೂರ್ಣ ತಪ್ಪು. ಮಿಲಿಟರಿ ಉದ್ದೇಶಗಳನ್ನು ಸಂಪೂರ್ಣವಾಗಿ ಸಾಧಿಸಿದ್ದರಿಂದ ಭಾರತ  ನಿಲ್ಲಿಸಿತು ಎಂದು ತಿಳಿಸಿದರು.

ಭಯೋತ್ಪಾದಕ ದಾಳಿಯಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ನ್ಯಾಯ ಒದಗಿಸಲು ಈ ಕಾರ್ಯಾಚರಣೆ ಪ್ರಾರಂಭಿಸಲಾಯಿತು. ಪಾಕಿಸ್ತಾನ ಗಡಿ ದಾಟುವುದು ಅಥವಾ ಅವರ ಪ್ರದೇಶವನ್ನು ವಶಪಡಿಸಿಕೊಳ್ಳುವುದು ಆಪರೇಷನ್ ಸಿಂಧೂರದ ಉದ್ದೇಶವಾಗಿರಲಿಲ್ಲ ಎಂದು ಹೇಳಿದರು.

# ಜೂಜಾಟ: 11 ಜನರ ಬಂಧನ

**ಕಲಬುರಗಿ,ಜು.28**–ಫರಹತಾಬಾದ ಪೊಲೀಸ್ ಠಾಣೆ ವ್ಯಾಪ್ತಿಯ ಕವಲಗಾ (ಬಿ) ಮತ್ತು ನದಿಸಿನ್ನೂರ ಗ್ರಾಮಗಳಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಫರಹತಾಬಾದ ಪಿಐ ಮಲ್ಲಿಕಾರ್ಜುನ ಇಕ್ಕಳಕಿ, ಸಿಬ್ಬಂದಿಗಳಾದ ಎಎಸ್‌ಐ ವಿಜಯಕುಮಾರ, ಪ್ರಕಾಶ, ಮಹಿಬೂಬ್, ತಿರುಪತಿ, ಸಾಜೀದಪಾಶಾ ಮತ್ತು ಸಬ್–ಅರ್ಬನ್ ಉಪ ವಿಭಾಗದ ಎಸಿಪಿ ಡಿ.ಜಿ.ರಾಜಣ್ಣ, ಎಎಸ್‌ಐ ಕಲ್ಯಾಣಿ, ಸಿಬ್ಬಂದಿಗಳಾದ ಸಾಜೀದಪಾಶಾ, ಮಹಿಬೂಬ್ ಅವರು ದಾಳಿ ನಡೆಸಿ 11 ಜನರನ್ನು ಬಂಧಿಸಿದ್ದಾರೆ.

ಕವಲಗಾ (ಬಿ) ಗ್ರಾಮದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಫರಹತಾಬಾದ ಪಿಐ ಮಲ್ಲಿಕಾರ್ಜುನ ಇಕ್ಕಳಕಿ, ಸಿಬ್ಬಂದಿಗಳಾದ ಎಎಸ್‌ಐ ವಿಜಯಕುಮಾರ, ಪ್ರಕಾಶ, ಮಹಿಬೂಬ್, ತಿರುಪತಿ, ಸಾಜೀದಪಾಶಾ ಅವರು ದಾಳಿ ನಡೆಸಿ ಸೂರ್ಯಕಾಂತ ಕಪಡಿ, ಶಿವಕುಮಾರ ಮಡಿವಾಳ, ಸಾಯಿಬಣ್ಣ ಮುಸಂಡಿ, ಸಂತೋಷ ಪರೀಟ್, ಭೀಮಣ್ಣ ತಳವಾರ, ಸಂಜುಕುಮಾರ ಅತನೂರ, ಶಿವಯೋಗಿ ತಳಕೇರಿ ಎಂಬುವವರನ್ನು ಬಂಧಿಸಿ 23500 ರೂ.ನಗದು ಮತ್ತು ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ.

# ನಟಿ ರಮ್ಯಾ–ದರ್ಶನ್ ಪತ್ನಿ ವಿಜಯಲಕ್ಷ್ಮಿ ಜಟಾಪಟಿ





**ಬೆಂಗಳೂರು,ಜು.28**–ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಕೊಲೆ ಆರೋಪಿಯಾಗಿರುವ ನಟ ದರ್ಶನ್ ಅಭಿಮಾನಿಗಳು ಅಶ್ಲೀಲ ಸಂದೇಶ ಕಳುಹಿಸಿರುವ ಬಗ್ಗೆ ನಟಿ ರಮ್ಯಾ ಹಾಗೂ ದರ್ಶನ್ ಪತ್ನಿ ವಿಜಯಲಕ್ಷ್ಮಿ ಪ್ರತಿದೂರು ನೀಡಲು ಮುಂದಾಗಿದ್ದು, ಇವರಿಬ್ಬರ ನಡುವೆ ಜಟಾಪಟಿಗೆ ಕಾರಣವಾಗಿವೆ,

ಹತ್ಯೆಗೀಡಾದ ರೇಣುಕಾಸ್ವಾಮಿ ಕುಟುಂಬದ ಪರ ರಮ್ಯಾ ನಿಂತಿರುವುದು ದರ್ಶನ್ ಅಭಿಮಾನಿಗಳ ಕೋಪಕ್ಕೆ ಎಡೆಮಾಡಿಕೊಟ್ಟಿದೆ. ಇದರ ಬೆನ್ನಲ್ಲೇ ದರ್ಶನ್ ಅಭಿಮಾನಿಗಳಿಗಾಗಿಯೇ ತೆರೆಯಲಾಗಿರುವ ಅಫಿಶಿಯಲ್ ಫ್ಯಾನ್ಸ್‌ಪೇಜ್ 'ಡಿ' ಕಂಪನಿ ಯಾರೊಬ್ಬರೂ ಯಾವುದೇ ಪ್ರತಿಕ್ರಿಯೆ ನೀಡದಂತೆ ಮನವಿ ಮಾಡಲಾಗಿದೆ.

ದರ್ಶನ್ ಮೇಲೆ ಗೌರವವಿರುವ ಯಾವೊಬ್ಬ ಅಭಿಮಾನಿಯೂ ಕೂಡ ವಿವಾದಕ್ಕೆ ಕಿವಿಗೊಡಬೇಡಿ, ಯಾವುದೇ ಸಂದೇಶ ಕಳುಹಿಸಬೇಡಿ.ಪ್ರಚಾರಕ್ಕಾಗಲಿ ಹುನ್ನಾರ ಮಾಡಲಿ ಯಾರೇ ಏನೂ ಹೇಳಿದರೂ ತಲೆ ಕೆಡಿಸಿಕೊಳ್ಳಬೇಡಿ ಎಂದು ಡೆವಿಲ್ ಸಿನಿಮಾದ ಪೋಸ್ಟರ್‌ವೊಂದನ್ನು ಹಂಚಿಕೊಂಡದೆ.

ಯಾರೂ ಏನೇ ಅಂದರೂ ತಲೆ ಕೆಡಿಸಿಕೊಳ್ಳಬೇಡಿ. ದರ್ಶನ್ ಮಾಡಿರುವ ಸಮಾಜಮುಖಿ ಕಾರ್ಯಗಳು ಎಲ್ಲರಿಗೂ ಗೊತ್ತಿದೆ. ಅವಮಾನಗಳು ಇನ್ನಷ್ಟು ಕೆಲಸ ಮಾಡಲು ಮೆಟ್ಟಿಲಾಗಲಿ ಎಂದು ಡಿ ಕಂಪನಿ ಅಭಿಮಾನಿಗಳಿಗೆ ಮನವಿ ಮಾಡಿದೆ.

**ಏನಿದು ವಿವಾದ?:** ರೇಣುಕಾಸ್ವಾಮಿ ಕುಟುಂಬದ ಪರ ರಮ್ಯಾ ಬೆಂಬಲ ನೀಡಿರುವುದ ದರ್ಶನ್ ಅಭಿಮಾನಿಗಳ ಕೆಂಗಣ್ಣಿಗೆ ಗುರಿಯಾಗಿದೆ. ಈ ಹಿನ್ನೆಲೆಯಲ್ಲಿ ನಿರಂತರವಾಗಿ ರಮ್ಯಾ ಅವರಿಗೆ ದರ್ಶನ್ ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ ನಿರಂತರವಾಗಿ ಅಶ್ಲೀಲ ಸಂದೇಶಗಳನ್ನು ಕಳುಹಿಸುತ್ತಿದ್ದಾರೆ.

ಈ ಸಂದೇಶಗಳ ಕಾರಣದಿಂದಾಗಿ ನಟಿ ರಮ್ಯಾ ಅವರು ದರ್ಶನ್ ಅಭಿಮಾನಿಗಳ ವಿರುದ್ಧ ತಿರುಗಿ ಬಿದ್ದಿದ್ದು, ಅವರ ಮುಖವಾಡ ಬಯಲು ಮಾಡಿದ್ದಾರೆ. ತಮಗೆ ಅಶ್ಲೀಲ ಸಂದೇಶ ಕಳುಹಿಸುತ್ತಿರುವ ದರ್ಶನ್ ಅಭಿಮಾನಿ ಹೆಸರಿನ ಸೋಷಿ ಯಲ್ ಮೀಡಿಯಾ ಅಕೌಂಟ್‌ಗಳ ಸ್ಕ್ರೀನ್ ಶಾಟ್ ತೆಗೆದು ಕಳುಹಿಸುತ್ತಿದ್ದಾರೆ.

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ದರ್ಶನ್ ಹೆಸರು ಕೇಳಿ ಬಂದಾಗಲೂ ರಮ್ಯಾ ಮಾತನಾಡಿದ್ದರು. ದರ್ಶನ್ ಅವರಿಂದ ತಪ್ಪಾಗಿದ್ದರೆ ಕಠಿಣ ಶಿಕ್ಷೆಯೇ ಆಗಬೇಕು ಎಂದು ಪ್ರತಿಕ್ರಿಯಿಸಿದ್ದ ದರ್ಶನ್ ಅವರಿಗೆ ನೀಡಿರುವ ಹೈಕೋರ್ಟ್‌ನ ಕ್ರಮವನ್ನು ಪ್ರಶ್ನಿಸಿ ರಾಜ್ಯಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ತೀರ್ಪು ಕಾಯ್ದಿರಿಸಿದೆ. ಆಗಲೂ ದರ್ಶನ್ ವಿರುದ್ಧವೇ ರಮ್ಯಾ ಪೋಸ್ಟ್ ಮಾಡಿದ್ದರು. ಇದು ದರ್ಶನ್ ಅಭಿಮಾನಿಗಳನ್ನು ಕೆರಳಿಸಿದೆ.

ರಮ್ಯಾ ಅವರನ್ನು ವೈಯಕ್ತಿಕವಾಗಿ ಅಶ್ಲೀಲ ಪದಗಳಿಂದ ನಿಂದಿಸುತ್ತಿದ್ದಾರೆ. ಈ ಎಲ್ಲ ಸ್ಕ್ರೀನ್‌ಶಾಟ್‌ಗಳನ್ನು ರಮ್ಯಾ ಹಂಚಿಕೊಂಡಿದ್ದಾರೆ.

ರಮ್ಯಾ–ದರ್ಶನ್ ಪತ್ನಿ ಹೋರಾಟ: ಕೊಲೆಯಾದ ರೇಣುಕಾಸ್ವಾಮಿಗೆ ನ್ಯಾಯ ಸಿಗಲಿದೆ ಎನ್ನುವ ನಟಿ ರಮ್ಯಾ ಅವರ ಸಾಮಾಜಿಕ ಜಾಲತಾಣದ ಪೋಸ್ಟ್‌ಗೆ ದರ್ಶನ್ ಅಭಿಮಾನಿಗಳು ಅಶ್ಲೀಲವಾಗಿ ಮೆಸೇಜ್, ಕಾಮೆಂಟ್ಸ್‌ಗಳನ್ನು ಹಾಕುತ್ತಿರುವ ಕುರಿತು ರಮ್ಯಾ ದೂರು ನೀಡುವುದಾಗಿ ಹೇಳಿದ ಬೆನ್ನಲ್ಲೇ ಪತಿ ಪರವಾಗಿ ವಿಜಯಲಕ್ಷ್ಮಿ ಕಾನೂನು ಹೋರಾಟಕ್ಕೆ ಇಳಿದಿದ್ದಾರೆ.

ಪ್ರಕರಣದ ವಿಚಾರಣೆಯು ನ್ಯಾಯಾಲಯದಲ್ಲಿ ಮುಂದುವರೆದಿದ್ದು, ಇನ್ನೂ ಇತ್ಯರ್ಥ ಆಗಿಲ್ಲ. ಆಗಲೇ ದರ್ಶನ್ ಅನ್ನು ದೋಷಿ ಎಂದು ಹೇಳುತ್ತಿದ್ದಾರೆ. ಕೋರ್ಟ್ ಅಲ್ಲಿರುವ ಪ್ರಕರಣಕ್ಕೆ ರಮ್ಯಾ ಕಾಮೆಂಟ್ ಮಾಡಿದ್ದು ಸರಿಯಲ್ಲ. ರಮ್ಯಾ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳುವಂತೆ ದರ್ಶನ್ ಪತ್ನಿ ವಿಜಯಲಕ್ಷ್ಮಿ ಸೈಬರ್ ಕ್ರೈಂ ಪೊಲೀಸ್ ಠಾಣೆಗೆ ದೂರು ನೀಡಲು ಮುಂದಾಗಿದ್ದಾರೆ.

ಇನ್ಸ್ಟಾಗ್ರಾಂನಲ್ಲಿ ರಮ್ಯಾ ದರ್ಶನ್ ವಿರುದ್ಧ ಪೋಸ್ಟ್ ಹಾಕಿ ರೇಣುಕಾಸ್ವಾಮಿಗೆ ನ್ಯಾಯ ಸಿಗಲಿದೆ ಎಂದು ಬರೆದುಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಇಂದು ಮಧ್ಯಾಹ್ನದ ವೇಳೆಗೆ ವಿಜಯಲಕ್ಷ್ಮಿ ನಟಿ ರಮ್ಯಾ ವಿರುದ್ಧ ದೂರು ನೀಡಲಿದ್ದಾರೆ.

ದರ್ಶನ್ ಅಭಿಮಾನಿಗಳು ವಿರುದ್ಧ ನಟಿ ರಮ್ಯಾ ಕೆಂಡಕಾರಿದ್ದಾರೆ. ದರ್ಶನ್ ಫ್ಯಾನ್ಸ್ ಸೋಗಿನಲ್ಲಿ ರಮ್ಯಾಗೆ ಅಶ್ಲೀಲ ಕಮೆಂಟ್ ಮಾಡಿದ್ದವರ ಅಕೌಂಟ್‌ಗಳನ್ನು ರಮ್ಯಾ ಬಹಿರಂಗೊಳಿಸಿದ್ದಾರೆ.


ರೇಣುಕಾಸ್ವಾಮಿ ಕಳುಹಿಸಿದ ಸಂದೇಶಕ್ಕೂ, ಡಿಬಾಸ್ ಫ್ಯಾನ್ಸ್ ಕಳುಹಿಸುತ್ತಿರುವ ಸಂದೇಶಕ್ಕೂ ಯಾವುದೇ ವ್ಯತ್ಯಾಸವಿಲ್ಲ. ಇವರೆಲ್ಲಾ ಸ್ತ್ರೀ–ದ್ವೇಷಿ ಮನೋಭಾವದವರು. ಇಂತವರಿಂದಲೇ ಹೆಣ್ಮಕ್ಕಳು ದೌರ್ಜನ್ಯ, ಅತ್ಯಾಚಾರಕ್ಕೆ ಒಳಗಾಗುತ್ತಿದ್ದಾರೆ ಎಂದು ಇನ್ಸ್ಟಾಗ್ರಾಂ ಪೋಸ್ಟ್‌ನಲ್ಲಿ ರಮ್ಯಾ ಆಕ್ರೋಶ ಹೊರ ಹಾಕಿದ್ದಾರೆ.

ದೂರು ಕೊಟ್ಟರೆ ಕ್ರಮ: ನಟ ದರ್ಶನ್ ಅಭಿಮಾನಿಗಳಿಂದ ಅಶ್ಲೀಲ ಸಂದೇಶ ಬಂದಿರುವ ಬಗ್ಗೆ ನಟಿ ರಮ್ಯಾ ದೂರು ನೀಡಿದರೆ ಕ್ರಮಕೈಗೊಳ್ಳುವುದಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುಮೊಟೊ ಪ್ರಕರಣ ದಾಖಲಿಸಲು ಅವಕಾಶವಿದ್ದರೆ ಪೊಲೀಸರು ಪರಿಶೀಲಿಸುತ್ತಾರೆ. ಆದರೆ, ಮೊದಲು ರಮ್ಯಾ ದೂರು ಕೊಡಲಿ ಎಂದರು.

ಯಾವುದೇ ಸೂಕ್ಷ್ಮವಿರುವ ವಿಚಾರಗಳು ಇರುತ್ತದೋ ಅವುಗಳನ್ನೆಲ್ಲ ಬ್ಲಾಕ್ ಮಾಡುತ್ತಾರೆ ಅಥವಾ ಅವರು ದೂರು ನೀಡಿದರೆ ಅದರ ಆಧಾರದ ಮೇಲೆ ಕ್ರಮ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.

# ನದಿ ದಂಡೆಗೆ ಹೋಗದಂತೆ ಸಾರ್ವಜನಿಕರಲ್ಲಿ ಡಿ.ಸಿ. ಮನವಿ



**ಕಲಬುರಗಿ,ಜು.28–** ಮಹಾರಾಷ್ಟ್ರ ರಾಜ್ಯದ ಉಜ್ಜನಿ ಜಲಾಶಯದಿಂದ ಭೀಮಾ ನದಿಗೆ 60 ಸಾವಿರ ಕ್ಯೂಸೆಕ್ ನೀರು ಹರಿಬಿಡಲಾಗಿದ್ದು, ಜಿಲ್ಲೆಯ ಅಫಜಲಪುರ ತಾಲೂಕಿನ ಸೊನ್ನ ಬ್ಯಾರೇಜಿಗೆ ರವಿವಾರ ಸಂಜೆಯೆ ತಲುಪಲಿದೆ. ಇನ್ನು ಉಜ್ಜನಿ ಮತ್ತು ವೀರ್ ಜಲಾಶಯದಿಂದ ಹೆಚ್ಚಿನ ನೀರು ಬಂದಲ್ಲಿ ಸೊನ್ನ ಬ್ಯಾರೇಜ್ ಮೂಲಕ ಭೀಮಾ ನದಿಗೆ ಹಾಗೂ ಬೆಣ್ಣೆತೊರೆ ಜಲಾಶಯದ ಮೂಲಕ ಕೆಳ ಪಾತ್ರದ ನದಿಗೆ ನೀರು ಬಿಡಲಾಗುತ್ತಿದೆ. ಹೀಗಾಗಿ ಸಾರ್ವಜನಿಕರು ನದಿ ದಂಡೆ ಕಡೆ ಹೋಗದಂತೆ ಮತ್ತ ಮುನ್ನೆಚ್ಚರಿಕೆ ವಹಿಸಬೇಕೆಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಜಿಲ್ಲೆಯ ಜನತೆಯಲ್ಲಿ ಮನವಿ ಮಾಡಿದ್ದಾರೆ.

ಸೊನ್ನ ಬ್ಯಾರೇಜ್‌ನಿಂದ ಈಗಾಗಲೆ 4,000 ಕ್ಯುಸೆಕ್ ನೀರು ಭೀಮಾ ನದಿಗೆ ಹರಿಬಿಡಲಾಗುತ್ತಿದೆ. ಮಳೆಯ ಮುನ್ಸೂಚನೆ ಇರುವ ಕಾರಣ ಜಲಾಶಯದ ಒಳಹರಿವು ಹೆಚ್ಚಾದಂತೆ ಹೊರ ಹರಿವು ಹೆಚ್ಚಲಿದೆ. ಸೊನ್ನ ಮತ್ತು ಬೆಣ್ಣೆತೊರೆ ಬ್ಯಾರೇಜ್ ಕೆಳಗಡೆ ಇರುವ ನದಿ ಪಾತ್ರದ ಜನರು ಎಚ್ಚರಿಕೆಯಿಂದಿರಲು ಕೋರಲಾಗಿದೆ.

ನದಿ, ಹಳ್ಳ, ಕೆರೆ ದಡದಲ್ಲಿ ಬಟ್ಟೆ ತೊಳೆಯುವುದು, ಈಜಾಡುವುದು, ದನ–ಕರುಗಳನ್ನು ಮೆಯಿಸುವುದು ಹಾಗೂ ಅಪಾಯವಿರುವ ಸೇತುವೆಗಳಲ್ಲಿ ಸಂಚರಿಸಬಾರದು.  ಪ್ರವಾಹ ಸಂದರ್ಭದಲ್ಲಿ ಮೀನುಗಾರರಿಗೆ ಮೀನು ಹಿಡಿಯಲು ನದಿಯ ಕಡೆ ಹೋಗಬಾರದು ಎಂದು ಸಾರ್ವಜನಿಕರಿಗೆ ತಿಳಿಸಲಾಗಿದೆ.ನಿರಂತರ ಮಳೆಯಿಂದ ಅಪಾಯವಿರುವ ಮನೆ ಗೋಡೆ, ಶಾಲೆ, ಅಂಗನವಾಡಿ ಹಾಗೂ ಇತರೆ ಕಟ್ಟಡಗಳ ಕುಸಿಯುವ ಸಾಧ್ಯತೆ ಇರುವದರಿಂದ ಅಧಿಕಾರಿಗಳು ಸಾರ್ವಜನಿಕರ ಸುರಕ್ಷತೆಯ ಮುನ್ನೆಚ್ಚರಿಕೆ ಕ್ರಮಗಳನು ತೆಗದುಕೊಳ್ಳಬೇಕು. ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಪ್ರತಿ ಗ್ರಾಮಗಳಲ್ಲಿ ಡಂಗೂರ ಸಾರುವುದು ಹಾಗೂ ಮೈಕ್ ಮೂಲಕ ಜಾಗೃತಿ ಮೂಡಿಸಬೇಕು. ನದಿ, ಹಳ್ಳ, ಕೆರೆ ದಡದಲ್ಲಿರುವ ದೇವಸ್ಥಾನ, ಮಸೀದಿ, ಪ್ರಾರ್ಥನಾ ಮಂದಿರಗಳಲ್ಲಿ ಪೂಜೆ ಸಲ್ಲಿಸುವವರನ್ನು ಮ ನವೊಲಿಸಿ ನದಿ ದಡಕ್ಕೆ ತೆರಳದಂತೆ ಸಾರ್ವಜನಿಕರ ಮನವೊಲಿಸಬೇಕು.

ಕೇಂದ್ರ ಸ್ಥಾನದಲ್ಲಿರಲು ಅಧಿಕಾರಿಗಳಿಗೆ ಸೂಚನೆ: ಜಿಲ್ಲಾ, ತಾಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿ–ಸಿಬ್ಬಂದಿಗಳು ಕೇಂದ್ರ ಸ್ಥಾನದಲ್ಲಿದ್ದು ಪ್ರವಾಹ ಮತ್ತು ಭಾರಿ ಮಳೆಯಿಂದ ಜಿಲ್ಲೆಯಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಯಾಗದಂತೆ ಮುನ್ನಚ್ಚರಿಕೆಗಳನ್ನು ತೆಗದುಕೊಳ್ಳಬೇಕು. ಸಂಭವನೀಯ ಪ್ರವಾಹ ಎದುರಾದಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶದ ತಗ್ಗು ಪ್ರದೇಶಗಳನ್ನು ಜನರನ್ನು ಗುರುತಿಸಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಬೇಕು. ಸಂತ್ರಸ್ತರಿಗೆ ಕಾಳಜಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ಡಿ.ಸಿ. ಸೂಚನೆ ನೀಡಿದ್ದಾರೆ.

## ಕನ್ನಡ ಸೇನೆ ಕರ್ನಾಟಕ ಸಂಘಟನೆ ಜಿಲ್ಲಾಧ್ಯಕ್ಷರಾಗಿ ಬಸವರಾಜ ಅತ್ತನೂರು ನೇಮಕ



ಯುವ ಮಾರ್ಗ ಸುದ್ದಿ

**ಸಿರವಾರ, ಜು.28**–ರಾಯಚೂರು ಜಿಲ್ಲೆಯ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಜಿಲ್ಲಾಧ್ಯಕ್ಷರನ್ನಾಗಿ ಬಸವರಾಜ ಅತ್ತನೂರು ಅವರನ್ನು ನೇಮಕ ಮಾಡಿ ಸಂಘಟನೆಯ ರಾಜ್ಯಾಧ್ಯಕ್ಷರಾದ ಕೆ.ಆರ್.ಕುಮಾರ್ ಅವರು ಆದೇಶಿಸಿದ್ದಾರೆ.

ಈ ಕುರಿತು ಆದೇಶ ಪತ್ರದಲ್ಲಿ ನಾವು ನಮ್ಮದು ನಮಗಾಗಿ ಅಂತ ಜೀವಿಸುವುದು ಸ್ವಾರ್ಥವಾಗುತ್ತದೆ ನಾಡುನುಡಿ, ನೆಲ, ಜಲಕ್ಕಾಗಿ, ಕನ್ನಡ ಕುಲಕೋಟಿಯ ಅಧಿದೇವತೆಯ ಋಣ ತೀರಿಸುವುದಕ್ಕೆ ಬದುಕುವುದು ನಿಸ್ವಾರ್ಥವಾಗುತ್ತದೆ. ಈ ಸದಾಶಯ ಹಿನ್ನೆಲೆಯಲ್ಲೇ ರಸಯಷಿ ಕುವೆಂಪು ಅವರು "ಕನ್ನಡಕ್ಕಾಗಿ ಕೈ ಎತ್ತು ನಿನ್ನ ಕೈ ಕಲ್ಪ ವೃಕ್ಷವಾಗುತ್ತದೆ" ಎಂದು ಗುಡುಗಿದರು,

ಇಂಥ ಪೂರ್ವಸೂರಿಗಳ ಅಪೇಕ್ಷೆಯಂತೆ ಕನ್ನಡಸೇನೆ ಜನ್ಮ ತಾಳಿದೆ. ಕಳೆದ 18 ವರ್ಷಗಳಿಂದ ಈ ನಾಡಿನ ಋಣ ತೀರಿಸಲು ಕಂಕಣಬದ್ಧವಾಗಿದೆ. ಕಾವೇರಿಯಿಂದ ಹಿಡಿದು ಹೊಗೇನಕಲ್ ವರೆಗೆ ಬೆಳಗಾವಿಯಿಂದ ಹಿಡಿದು ಬೆಂಗಳೂರವರೆಗೆ ಪ್ರತಿಯೊಂದು ವಿಷಯಕ್ಕೂ ಕನ್ನಡ ಸೇನೆ ಧ್ವನಿಯಾಗಿದೆ. ಉತ್ತರ ಕರ್ನಾಟಕದ ಪ್ರಗತಿಗೆ: 371 ಕಲಂ ಜಾರಿಗಾಗಿ ದೆಹಲಿಯವರೆಗೆ ಚಳವಳಿ ಮಾಡಿ ಸಂಚಲನ ಮೂಡಿಸಿದ್ದು ಕನ್ನಡ ಚಳವಳಿಯ ಚಾರಿತ್ರಿಕ ಘಟ್ಟ

ನಾಡಿನ ಜ್ವಲಂತ ಸಮಸ್ಯೆ ಪರಿಹಾರಕ್ಕೆ, ಗಂಭೀರ ಚಳವಳಿಗೆ, ಪ್ರಾಮಾಣಿಕ ಸೇವೆಗೆ 'ಸೇನೆ" ಸದಾಸಿದ್ದ ಎಂದು ತಿಳಿಸಲು ಹೆಮ್ಮೆಯಾಗುತ್ತದೆ.

ಸಕ್ರಿಯ ಕಾರ್ಯಕರ್ತರಿಗೆ ಇಲ್ಲಿ ಮಣೆ, ಶುದ್ಧ ಹಸ್ತ: ಅಸ್ಪೇಲಿತ ಮಾತುಗಾರಿಕೆಗೆ, ಪ್ರತಿಭೆಗೆ ಆದ್ಯತೆ, ವಸೂಲಿ, ದಗಲ್ಬಾಜಿ ಇರಾದೆ ಉಳ್ಳವರಿಗೆ ನಿಜಕ್ಕೂ ಇಲ್ಲಿ ನೆಲೆ ಇಲ್ಲ. ಸರ್ವಧರ್ಮ ಸಮನ್ವಯ ದೃಷ್ಟಿ ಕಾಯಕತತ್ವಕ್ಕೆ ಪ್ರಥಮ ಪ್ರಾಶಸ್ತ್ಯ ಇದೆ. 'ಮಡಿದು ತಮ್ಮ ಕುಟುಂಬ ಪೋಷಿಸಿಕೊಂಡು ಸಂಘಟನೆ ಕಟ್ಟಬೇಕು, ಎಂಬ ವಿಶಾಲ

## ಸಚಿವರಿಗೆ ಅದ್ದೂರಿ ಸ್ವಾಗತ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜು.28**– ಪಟ್ಟಣಕ್ಕೆ ಆಗಮಿಸಿದ ಸಚಿವರಾದ ಡಾ: ಶರಣಪ್ರಕಾಶ ಪಾಟೀಲ್, ಎನ್ ,ಎಸ್ ಬೋಸರಾಜು ಅವರಿಗೆ ಮಾಜಿ ಶಾಸಕ ರಾಜ್ಯ ಕೆಪಿಸಿಸಿ ಉಪಾಧ್ಯಕ್ಷ ಡಿ.ಎಸ್ ಹೂಲಗೇರಿ ನೇತೃತ್ವದಲ್ಲಿ ಅದ್ದೂರಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಅಧ್ಯಕ್ಷ ಗೋವಿಂದ ನಾಯಕ, ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು, ಎಸ್ ಸಿ ಬ್ಲಾಕ್ ಸಮಿತಿ ಅಧ್ಯಕ್ಷ ಉಮೇಶ ಹುನಕುಂಟಿ, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ವೆಂಕಟೇಶ ಗುತ್ತೆದಾರ, ಮಹಮ್ಮದ್ ಹಾಜಿಬಾಬ ಕರಡಕಲ್, ರಾಘವೇಂದ್ರ ತುಪ್ಪದ, ಗದ್ದೆನಗೌಡ ಸೇರಿದಂತೆ ಇತರರು ಇದ್ದರು.

## ಅರಕೇರಾ ಪಟ್ಟಣದ ವೃತ್ತಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲು ಆಗ್ರಹ



ಯುವ ಮಾರ್ಗ ಸುದ್ದಿ

**ಅರಕೇರಾ,ಜು.28**–ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲು ಕ್ರಮ ವಹಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಆಗ್ರಹಿಸಿತು.

ಪಟ್ಟಣದ ತಹಸೀಲ್ ಕಚೇರಿಯಲ್ಲಿ ತಹಸೀಲ್ದಾರ್ ಅಮರೇಶ ಬೀರಾದರಗೆ ಸೋಮವಾರ ಮನವಿ ಸಲ್ಲಿಸಿತು. ತಾಲೂಕು ಅಧ್ಯಕ್ಷ ಹನುಮೇಶ ನಾಯಕ ಮಾತನಾಡಿ, ಪಟ್ಟಣದಲ್ಲಿ ಸರಣಿ ಕಳ್ಳತನಗಳು ನಡೆಯುತ್ತಿವೆ. ಮನೆ, ಜಾನುವಾರು, ಅಂಗಡಿಗಳಲ್ಲಿ ಕಳ್ಳತನ ನಡೆಯುತ್ತಿವೆ. ಅಲ್ಲದೇ ಗುರುವಾರ ನಡೆಯುವ ವಾರದ ಸಂತೆಯಲ್ಲಿ ಅಪರಿಚಿತರ ಓಡಾಟ ಜೊತೆಗೆ ಸರಗಳ್ಳತನ, ಪಿಕ್ ಪಾಕೇಟ್ ಚಟುವಟಿಕೆಗಳು ನಡೆಯುತ್ತಿವೆ. ಇವುಗಳ ನಿಯಂತ್ರಣ ಹಾಗೂ ಕಳ್ಳರನ್ನು ಸುಲಭವಾಗಿ ಪತ್ತೆ ಹಚ್ಚಲು ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಬೇಕು ಎಂದು ಒತ್ತಾಯಿಸಿದರು. ಪದಾಧಿಕಾರಿಗಳಾದ ಹಾಜಿ ಮಸ್ತಾನ್, ಭಗವಂತ್ರಾಯ, ಲಕ್ಷ್ಮಣ ನಾಯಕ, ಅಂಬ್ರೇಶ ನಾಯಕ ಇದ್ದರು.

## ಅಂಬೇಡ್ಕರ್ ರವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ: ಸಚಿವ ಡಾ: ಶರಣಪ್ರಕಾಶ ಪಾಟೀಲ್



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜು.28**–ದೇಶಕ್ಕೆ ಸಂವಿಧಾನವನ್ನು ನೀಡುವ ಮೂಲಕ ಸರ್ವರೂ ಸಮಾನರೆಂದು ಸಾರಿದ ಅಂಬೇಡ್ಕರ್‌ರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಬೇಕೆಂದು ಸಚಿವ ಶರಣಪ್ರಕಾಶ ಪಾಟೀಲ್ ಹೇಳಿದರುಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಹುದಿನಗಳ ಬೇಡಿಕೆಯಾಗಿದ್ದ ಈ ಭವನ ಉದ್ಘಾಟಿಸಲಾಗಿದ್ದು, ಸಮುದಾಯದ ಜನರು ಇದರ ಸದ್ಬಳಕೆ ಮಾಡಿಕೊಳ್ಳಬೇಕು. ಸಮಾಜಕ್ಕೆ ಭವನ ಸದುಪವಾಗಲಿ." ಎಂದು ಸಚಿವರು ಶುಭ ಹಾರೈಸಿದರು.ಈ ಸಂದರ್ಭದಲ್ಲಿ ಶಾಸಕ ಮಾನಪ್ಪ ವಜ್ಜಲ್, ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಬಯ್ಯಾಪೂರ. ಎ.ವಸಂತಕುಮಾರ, ಜಿಲ್ಲಾಧಿಕಾರಿ ನಿತಿನ್ ಕೆ.. ಜಿ.ಪಂ. ಸಿಇಓ ಈಶ್ವರ ಕಾಂದೂ, ಎಸ್ ಪಿ ಪುಟ್ಟಮಾದಯ್ಯ,ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ಶಶಿಧರ ಪಾಟೀಲ್ ಆಶಿಹಾಳ, ವೆಂಕಟೇಶ ಗುತ್ತೇದಾರ ಸೇರಿ ಇತರರು ಇದ್ದರು.

## ಶ್ರೀರುದ್ರಮುನಿ ಮಹಾ ಶಿವಯೋಗಿಗಳ 97 ನೇ ಮಹಾರಥೋತ್ಸವ



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.28**–ತಾಲೂಕಿನ ಚೀಕಲಪರ್ವಿ ಶ್ರೀರುದ್ರಮುನಿ ಮಹಾ ಶಿವಯೋಗಿಗಳ ಮಠದಲ್ಲಿ ಶ್ರೀರುದ್ರಮುನಿ ಮಹಾ ಶಿವಯೋಗಿಗಳ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವ ಅಂಗವಾಗಿ ಬೆಳ್ಳಿಗ್ಗೆ ಶ್ರೀರುದ್ರಮುನಿ ಮಹಾ ಶಿವಯೋಗಿಗಳ ಹಾಗೂ ಶ್ರೀ ವಿರೂಪಾಕ್ಷ ಮಹಾಶಿವಯೋಗಿಗಳ ಕತೃ ಗದ್ದುಗೆಗೆ ರುದ್ರಾಭಿಷೇಕ ಮತ್ತು ಅಲಂಕಾರ ಮಹಾಮಂಗಳಾರತಿ, ಷಟಸ್ಥಲ ಧ್ವಜಾರೋಹಣ ,ಗ್ರಾಮದಲ್ಲಿನ ಶ್ರೀ ವೀರಭದ್ರೇಶ್ವರ ದೇವಾ ಸ್ಥಾನದಿಂದ ಶ್ರೀ ಮಠದವರೆಗೆ ನಡೆದ ಪಲ್ಲಕ್ಕಿ ಉತ್ಸವದಲ್ಲಿ ಪುರವಂತರು ಹಾಗೂ ವಿವಿಧ ಜನಪದ ಕಲಾ ತಂಡಗಳೊಂದಿಗೆ ನೂರಾರು ಮುತ್ತೈದೆಯರು ಕಳಸ ಕುಂಭದೊಂದಿಗೆ ಭಾಗವಹಿಸಿದರು.

ಸಂಜೆ ಶ್ರೀಮಠದ ಆವರಣದಲ್ಲಿ ಶ್ರೀ ರುದ್ರಮುನಿ ಮಹಾ ಶಿವಯೋಗಿಗಳ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿಟ್ಟು ಪಲ್ಲಕ್ಕಿ ಮೆರವಣಿಗೆ ಹಾಗೂ ಶ್ರೀ ರುದ್ರಮುನಿ ಮಹಾ ಶಿವಯೋಗಿಗಳ ಮಹಾ ರಥೋತ್ಸವವನ್ನು ಸಾವಿರಾರು ಭಕ್ತರೊಂದಿಗೆ ನೆರವೇರಿತು.

ನಂತರ ನಡೆದ ಧರ್ಮ ಸಭೆಯಲ್ಲಿ ಹಾಲ್ವಿ ಚರಣಗಿರಿ ಸಂಸ್ಥಾನ ಮಠದ ಶ್ರೀ ಅಭಿನವ ಮಹಾಂತ ಸ್ವಾಮಿಗಳು ಆರ್ಶಿವಚನ ನೀಡಿ ಶ್ರೀರುದ್ರಮುನಿ ಮಹಾ ಶಿವಯೋಗಿಗಳ 97 ನೇ ಮಹಾರಥೋತ್ಸವವನ್ನು ಭಕ್ತರೆಲ್ಲರೂ ಕೂಡಿ ಶ್ರದ್ಧ ಭಕ್ತಿಗಳಿಂದ ವೈಭವದಿಂದ ಆಚರಿಸಿಕೊಂಡು ಬಂದ್ದಿದಿರಿ ಇನೂ 2 ವರ್ಷ ಕಳೆದಲ್ಲಿ ಶ್ರೀರುದ್ರಮುನಿ ಮಹಾ ಶಿವಯೋಗಿಗಳ 100 ನೇ ವರ್ಷದ ಮಹಾರಥೋತ್ಸವ ಆಗಮಿಸಲಿದ್ದು ಭಕ್ತರು ಅರ್ಥಪೂರ್ಣವಾಗಿ ಆಚರಿಸುವುದಕ್ಕೆ ಇಂದಿನಿಂದಲ್ಲಿ ಸಿದ್ದತೆಗಳನ್ನು ಮಾಡಿಕೊಂಡು ವಿಶೇಷವಾಗಿ ಆಚರಿಸಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಮಠದ ಶ್ರೀ ಸದಾಶಿವಮಹಾಸ್ವಾಮಿಗಳು, ಮುನವಳ್ಳಿ ಶ್ರೀಸೋಮೇಶ್ವರ ಮಠದ ಶ್ರೀ ಮುರುಘೇಂದ್ರ ಮಹಾಸ್ವಾಮಿಗಳು, ಮೈಸೂರಿನ ನಿರಂಜನದೇವರು, ಶ್ರೀ ಶೈಲ ಶ್ರೀಗಳು, ಹಳೆಕೋಟೆ ಮರಿಶಿವಯೋಗಿಗಳ ವಿರಕ್ತಮಠದ ಶ್ರೀ ಸಿದ್ದಬಸವ ಮಹಾಸ್ವಾಮಿಗಳು, ಅರಳಹಳ್ಳಿ ಶರಣಬಸವ ದೇವರು, ಸೇರಿದಂತೆ ಇನ್ನಿತರರು ಇದ್ದರು.

## ಜಾನುವಾರುಗಳ ತಂಗುದಾಣವಾದ ಸಿರವಾರ ಬಸ್ ನಿಲ್ದಾಣ

ಯುವ ಮಾರ್ಗ ಸುದ್ದಿ

**ಸಿರವಾರ, ಜು.28**– ಸಿರವಾರ ಪಟ್ಟಣದ ಮುಖ್ಯ ರಸ್ತೆ, ಬಸ್ ನಿಲ್ದಾಣವೇ ಅಕ್ಷರ ಸಹ ಜಾನುವಾರುಗಳ ತಂಗು ದಾಣವಾಗಿ ಮಾರ್ಪಟ್ಟಿದ್ದು, ವಾಹನ ಸವಾರರು ಜೀವ ಕೈಯಲ್ಲಿ ಇಡುಕೊಂಡು ಸಂಚರಿಸುವಂತಾಗಿದೆ.

ನಿತ್ಯ ರಸ್ತೆ ಮೇಲೆಯೇ ಬೀಡಾಡಿ ದನಗಳು ಮಲಗಿರುವುದರಿಂದ ಈ ಹಿಂದೆ ಅನೇಕ ಸಾವು ನೋವುಗಳು ಸಂಭವಿಸಿವೆ ಅದಾಗಯೂ ಕ್ರಮ ಕೈಗೊಳ್ಳಬೇಕಾದ ಪಟ್ಟಣ ಪಂಚಾಯತಿ ಅಧಿಕಾರಿಗಳು ಕಂಡು ಕಾಣದಂತೆ ವರ್ತಿಸುತ್ತಿರುವುದು ಸಾರ್ವಜನಿಕರು ಆಕ್ರೋಶಗೊಳ್ಳುವಂತೆ ಮಾಡಿದೆ, ಇನ್ನೂ ಪಟ್ಟಣದ ಸಾರಿಗೆ ಬಸ್ ನಿಲ್ದಾಣವೂ ಜಾನುವಾರುಗಳ ತಂಗು ದಾಣವಾಗಿದ್ದು ನಿತ್ಯ ರಾತ್ರಿ ಇಡೀ ಸಾರಿಗೆ ಬಸ್ ನಿಲ್ದಾಣ



ದನಗಳ ನಿವಾಸ ತಾಣವಾಗಿ ಮಾರ್ಪಟ್ಟಿದ್ದು ಬಸ್ ನಿಲ್ದಾಣದ ಆವರಣ ಎಂಡೆ ತಿಪ್ಪೆಯಂತಾಗುತ್ತದೆ ಇನ್ನಾದರೂ ಪಟ್ಟಣ ಪಂಚಾಯತಿ ಅಧಿಕಾರಿಗಳು ಬೀಡಾಡಿ ದನಗಳ ಹಾವಳಿಗೆ ಕಡಿವಾಣ ಹಾಕುವರೇ ಕಾದು ನೋಡಬೇಕು.

## ಸಿಯುಕೆಯಲ್ಲಿ ಕಾರ್ಗಿಲ್ ವಿಜಯ ದಿವಸ್



**ಕಲಬುರಗಿ,ಜು.28**– ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ತನ್ನ ಎನ್ ಎಸ್‌ಎಸ್ ಘಟಕದ ಮೂಲಕ ಕಾರ್ಗಿಲ್ ವಿಜಯ ದಿವಸ್ ಅನ್ನು ಶ್ರದ್ಧಾಪೂರ್ವಕವಾಗಿ ಸ್ಮರಿಸಿತು.ಈ ಕಾರ್ಯಕ್ರಮದಲ್ಲಿ ಮೇಣದಬತ್ತಿ ಬೆಳಗಿಸುವ ಸಮಾರಂಭ ಮತ್ತು ಉಪನ್ಯಾಸಗಳನ್ನು ಆಯೋಜಿಸಲಾಗಿತ್ತು ಇದರಲ್ಲಿ ಅನೇಕ ಶಿಕ್ಷಕರು. ಸಂಶೋಧಕರು, ಎನ್‌ಎಸ್‌ಎಸ್ ಸ್ವಯಂಸೇವಕರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.ಮೇಣದಬತ್ತಿಗಳನ್ನು ಬೆಳಗಿಸುವ ಮೂಲಕ ಭಾಗವಹಿಸುವವರು ಕಾರ್ಗಿಲ್ ಯುದ್ಧದಲ್ಲಿ ವಿಜಯ ಸಾಧಿಸಿದ ವೀರ ಸೈನಿಕರಿಗೆ ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದರು.

## ಕಿರು ಟೆಂಡರ್‌ಗೆ ಅಧಿಸೂಚನೆ

**ರಾಯಚೂರು,ಜು.28**–ಇಲ್ಲಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಿಂದ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವಾ ಏಜೆನ್ಸಿಗಳ ಮೂಲಕ ಶುಚಿಗೊಳಿಸುವ ವ್ಯಕ್ತಿಗಳನ್ನು ನೇಮಿಸಿಕೊಳ್ಳಲು ಕಿರು ಟೆಂಡರ್ ಅಧಿಸೂಚನೆ ಹೊರಡಿಸಲಾಗಿದ್ದು, ಅರ್ಹ ಏಜೆನ್ಸಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಯಮಗಳು ಮತ್ತು ಷರತ್ತುಗಳಿಗನುಗುಣವಾಗಿ ಆಸಕ್ತರು ಏಜೆನ್ಸಿಗಳು ಆಗಸ್ಟ್ 06ರ ಸಂಜೆ 5 ಗಂಟೆಯೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನ್ಯಾಯಾಲಯದ ವೆಬ್‌ಸೈಟ್ ವಿಳಾಸ: https://raichur.dcourts.gov.in/notice/short-tender-notification ನೋಡಬಹುದಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಯಟ್ ಕಾಲೇಜಿನ ಸುತ್ತಮುತ್ತಲು ನಿಷೇಧಾಜ್ಞೆ ಜಾರಿ: ಜಿಲ್ಲಾಧಿಕಾರಿ ನಿತೀಶ್ ಕೆ.

**ರಾಯಚೂರು,ಜು.28**– ರಾಯಚೂರಿನ ಯರಮರಸ್ ಡಯಟ್ ಕಾಲೇಜಿನಲ್ಲಿ ಆಗಸ್ಟ್ 2ರವರೆಗೆ ಗಣಕಯಂತ್ರ ಶಿಕ್ಷಣ ಪರೀಕ್ಷೆಯು ನಡೆಯಲಿದ್ದು, ಪರೀಕ್ಷಾ ಕೇಂದ್ರದ ಸುತ್ತಮುತ್ತಲು 200 ಮೀಟರ್ ಪ್ರದೇಶವನ್ನು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ. 163ರ ಪ್ರಕಾರ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲೆಯ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಈ ಪರೀಕ್ಷೆ ಕೇಂದ್ರದ ಸುತ್ತಮುತ್ತಲಿನ ಎಲ್ಲಾ ಝರಾಕ್ಸ್ ಅಂಡಿಗಳನ್ನು ಹಾಗೂ ಸೈಬರ್ ಕೆಫೆಗಳನ್ನು ಪರೀಕ್ಷೆ ಸಮಯದಲ್ಲಿ ಕಡ್ಡಾಯವಾಗಿ ಮುಚ್ಚುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

## ಜಿ.ಪಂ ನಿಂದ ಸಹಾಯವಾಣಿ ಪ್ರಾರಂಭ

**ರಾಯಚೂರು,ಜು.28**–ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಹಾಗೂ ಜಿಲ್ಲಾ ಪಂಚಾಯತಿ ಅಧೀನದ ಇಲಾಖೆಗಳಿಂದ ಒದಗಿಸಲಾಗುವ ಸೇವೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರ ದೂರುಗಳನ್ನು ಆಲಿಸಲು ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ಸಹಾಯವಾಣಿ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರು ಸದಪಯೋಗಪಡಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ತಿಳಿಸಿದ್ದಾರೆ.

ಜಿಲ್ಲೆಯ ಸಾರ್ವಜನಿಕರು ಕಚೇರಿ ಸಮಯ ಬೆಳಿಗ್ಗೆ 10 ರಿಂದ ಸಂಜೆ 5.30ರವರೆಗೆ ರಜಾ ದಿನಗಳನ್ನು ಹೊರತುಪಡಿಸಿ ಸಹಾಯವಾಣಿ ಸಂಖ್ಯೆ:08532–230539ಗೆ ಕರೆ ಮುಖಾಂತರ ಅಹ್ವಾಲುಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 31ರಂದು ಸ್ವಾತಂತ್ರ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆ

**ರಾಯಚೂರು,ಜು.28**– ಜಿಲ್ಲಾಡಳಿದಿಂದ 2025ರ ಸಾಲಿನ ಆಗಸ್ಟ್ 15ರ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸಮಾಲೋಚನೆ ಹಾಗೂ ವಿಷಯಗಳ ಕುರಿತು ಚರ್ಚಿಸಲು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರ ಅಧ್ಯಕ್ಷತೆಯಲ್ಲಿ ಜುಲೈ 31ರ ಬೆಳಿಗ್ಗೆ 11.30ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸ್ವಾತಂತ್ರ್ಯ ಹೋರಾಟಗಾರರು ಸಭೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ಯೂಟಿ ಪಾರ್ಲರ್, ಮಹಿಳಾ ಟೈಲರ್ ವೃತ್ತಿ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು,ಜು.28**– ಇಲ್ಲಿನ ಸ್ಟೇಟ್ ಬ್ಯಾಂಕ್‌ಆಫ್‌ಇಂಡಿಯಾ, ಗ್ರಾಮೀಣ ಸ್ವಯಂಉದ್ಯೋಗತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಬ್ಯೂಟಿ ಪಾರ್ಲರ್ ಮ್ಯಾನೇಜ್ಮೆಂಟ್ ಹಾಗೂ ಮಹಿಳಾ ಟೈಲರ್ ವೃತ್ತಿ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್,. 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸ್ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್‌ಆಫ್‌ಇಂಡಿಯಾ, ಗ್ರಾಮೀಣ ಸ್ವಯಂಉದ್ಯೋಗತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರುರಸ್ತೆ, ರಾಯಚೂರು. ಮೊಬೈಲ್ ಸಂಖ್ಯೆ: 8217382735 ಹಾಗೂ 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂಉದ್ಯೋಗತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿದ್ದರಾಮಯ್ಯ ಅಹಿಂದ ಸಮುದಾಯಕ್ಕೆ ಕೊಟ್ಟಿದ್ದಕ್ಕಿಂತ ಕಿತ್ತುಕೊಂಡಿದ್ದೇ ಹೆಚ್ಚು

**ಬೆಂಗಳೂರು,ಜು.28**– ದಲಿತರನ್ನು ಕೇವಲ ಮತಬ್ಯಾಂಕ್ ಆಗಿ ಬಳಸಿಕೊಳ್ಳುತ್ತಲೇ ಬಂದಿರುವ ರಾಜ್ಯ ಕಾಂಗ್ರೆಸ್ ಪಕ್ಷ ಮತ್ತೆ ದಲಿತರ ಬೆನ್ನಿಗೆ ಚೂರಿ ಹಾಕಿದೆ ಎಂದು ಜೆಡಿಎಸ್ ಆರೋಪಿಸಿದೆ. ಈ ಸಂಬಂಧ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್ ಮಜಾವಾದಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಹಿಂದ ಸಮುದಾಯಕ್ಕೆ ಕೊಟ್ಟಿದ್ದಕ್ಕಿಂತ ಕಿತ್ತುಕೊಂಡಿದ್ದೇ ಹೆಚ್ಚು ಎಂದು ಟೀಕಿಸಿದೆ.ದಲಿತ ವಿರೋಧಿ ಸಿದ್ದರಾಮಯ್ಯ ಅವರು 2025–26ನೇ ಸಾಲಿನಲ್ಲಿ ಎಸ್‌ಸಿಸಿ ಎಸ್ ಎಸ್‌ಪಿ/ ಟಿಎಸ್‌ಪಿ ಕಾರ್ಯಕ್ರಮಗಳಿಗೆ ಮೀಸಲಿಟ್ಟಿದ್ದ 42,017.51 ಕೋಟಿ ರೂ.ನಲ್ಲಿ 11,896.84 ಕೋಟಿ ರೂ.ವನ್ನು ಗ್ಯಾರಂಟಿ ಯೋಜನೆಗೆ ಹಂಚಿಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H